ಸಂಪುಟ: 11 ಸಂಚಿಕೆ: 167 ಪುಟ: 4+2 ಬೆಲೆ : 3.00 ಗುರುವಾರ, ಆಗಸ್ಟ್ 06, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 167 Pages : 4+2 Rate : 3.00 Thursday, August 06, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

ಸಾವಿರಾರು ರೈತರ ಹೋರಾಟದ ಬಳಿಕ ಬಹಿರಂಗ ಕ್ಷಮೆಯಾಚನೆ | ಬೆಳೆ ವಿಮೆ, ಪರಿಹಾರಕ್ಕೆ ಸರ್ಕಾರದ ಗಮನ ಸೆಳೆಯುವ ಭರವಸೆ

# ರೈತರ ಆಕ್ರೋಶಕ್ಕೆ ಕೊನೆಗೂ ಕರಗಿದ ಡಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ರೈತರೊಂದಿಗೆ ಅನುಚಿತವಾಗಿ ವರ್ತಿಸಿದ ಆರೋಪದಿಂದ ತೀವ್ರ ಟೀಕೆಗೆ ಗುರಿಯಾಗಿದ್ದ ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಕೊನೆಗೂ ಸಾವಿರಾರು ರೈತರ ಆಕ್ರೋಶದ ಮುಂದೆ ಅದರಲ್ಲೂ, ಜಿಟಿಜಿಟಿ ಮಳೆಯ ನಡುವೆಯೇ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ ಬಹಿರಂಗವಾಗಿ ಕ್ಷಮೆಯಾಚಿಸಿದರು. ರೈತರ ನ್ಯಾಯಯುತ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತಂದು ಪರಿಹಾರ ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

2025-26ನೇ ಸಾಲಿನ ಬೆಳೆ ವಿಮೆ ಬಿಡುಗಡೆ ಹಾಗೂ ಮಳೆ ಕೊರತೆಯಿಂದ ಬೆಳೆ ಹಾನಿಗೊಳಗಾದ ರೈತರಿಗೆ ಪರಿಹಾರ ನೀಡುವಂತೆ ಒತ್ತಾಯಿಸಿ ಕೆಲ ದಿನಗಳ ಹಿಂದೆ ಜಿಲ್ಲಾಧಿಕಾರಿಗಳನ್ನು ಭೇಟಿಯಾಗಿದ್ದ ರೈತರೊಂದಿಗೆ ಅವರು ಏಕವಚನದಲ್ಲಿ ಮಾತನಾಡಿದ ವಿಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿ ವ್ಯಾಪಕ ಆಕ್ರೋಶಕ್ಕೆ ಕಾರಣವಾಗಿತ್ತು. ಇದರ ಬೆನ್ನಲ್ಲೇ ಜಿಲ್ಲೆಯ ಸಮಗ್ರ ರೈತ ಸಂಘಟನೆಗಳ ಒಕ್ಕೂಟದ ಆಶ್ರಯದಲ್ಲಿ ಬುಧವಾರ ಬೃಹತ್ ಪ್ರತಿಭಟನೆ ನಡೆಯಿತು.

ಜಿಲ್ಲೆಯ ವಿವಿಧ ಭಾಗಗಳಿಂದ ಸಾವಿರಾರು ರೈತರು ಟ್ರ್ಯಾಕ್ಟರ್, ಚಕ್ಕಡಿ ಗಾಡಿ, ಟಂಟಂ ಹಾಗೂ ಎತ್ತಿನ ಬಂಡಿಗಳಲ್ಲಿ ಗದಗಕ್ಕೆ ಆಗಮಿಸಿದರು. ಚನ್ನಮ್ಮ ವೃತ್ತದಿಂದ ಮುಳಗುಂದ ನಾಕಾವರೆಗೆ ಪಾದಯಾತ್ರೆ ನಡೆಸಿ ಮಾನವ ಸರಪಳಿ ನಿರ್ಮಿಸಿದರು. ಬಳಿಕ ಜಿಲ್ಲಾಧಿಕಾರಿ ಕಚೇರಿಯತ್ತ



ಮೆರವಣಿಗೆ ನಡೆಸಿದ ವೇಳೆ ಪೊಲೀಸರು ಬ್ಯಾರಿಕೇಡ್ ಹಾಕಿ ತಡೆದ ಹಿನ್ನೆಲೆಯಲ್ಲಿ ರೈತರು ಗದಗಹುಬ್ಬಳ್ಳಿ ರಾಷ್ಟ್ರೀಯ ಹೆದ್ದಾರಿಯಲ್ಲೇ ಕುಳಿತು ರಸ್ತೆ ತಡೆ ನಡೆಸಿದರು.

ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ಹೆದ್ದಾರಿ ಸಂಚಾರ ಸಂಪೂರ್ಣ ಸ್ಥಗಿತಗೊಂಡು ವಾಹನಗಳ ಸಾಲು ಮೈಲುಗಟ್ಟಲೆ ನಿಂತಿತು. ಜಿಲ್ಲಾಧಿಕಾರಿಗಳು ಖುದ್ದಾಗಿ ಬಂದು ಕ್ಷಮೆ ಕೇಳುವವರೆಗೂ ಪ್ರತಿಭಟನೆ ಹಿಂಪಡೆಯುವುದಿಲ್ಲ ಎಂದು ರೈತರು ಪಟ್ಟು ಹಿಡಿದರು.

ಕೊನೆಗೆ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ರೈತರೊಂದಿಗೆ ಒರಟಾಗಿ ಮಾತನಾಡಿದ್ದೇನೆ. ನನ್ನ ಮಾತಿನಿಂದ ಯಾರಿಗಾದರೂ ನೋವಾಗಿದ್ದರೆ ಕ್ಷಮೆ ಕೋರುತ್ತೇನೆ. ರೈತರ ಬೆಳೆ ವಿಮೆ ಹಾಗೂ ಪರಿಹಾರ ಸೇರಿದಂತೆ ನ್ಯಾಯಯುತ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತಂದು ಈಡೇರಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ ಎಂದು ಬಹಿರಂಗವಾಗಿ ಹೇಳಿದರು. ಜಿಲ್ಲಾಧಿಕಾರಿಗಳ ಕ್ಷಮೆಯಾಚನೆಯ ಬಳಿಕ ರೈತರು ಪ್ರತಿಭಟನೆ ಹಿಂಪಡೆದು ಧರಣಿಗೆ ತೆರೆ ಎಳೆದರು.

> ರೈತರ ಮನಸ್ಸಿಗೆ ನೋವಾಗುವಂತೆ ಮಾತನಾಡಿದ್ದರೆ ಕ್ಷಮೆ ಕೋರುತ್ತೇನೆ. ರೈತರ ನ್ಯಾಯಯುತ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತಂದು ಈಡೇರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ.
> – **ಸಿ.ಎನ್. ಶ್ರೀಧರ,** ಜಿಲ್ಲಾಧಿಕಾರಿ, ಗದಗ




## ಮಳೆಯಲ್ಲೂ ಕರ್ತವ್ಯ ನಿರ್ವಹಿಸಿದ ಎಸ್‌ಪಿ

ಪ್ರತಿಭಟನೆ ವೇಳೆ ಯಾವುದೇ ಅಹಿತಕರ ಘಟನೆ ನಡೆಯದಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಅವರ ನೇತೃತ್ವದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು. ಸುರಿಯುತ್ತಿದ್ದ ಮಳೆಯಲ್ಲೇ ಎಸ್‌ಪಿ ಪ್ರತಿಭಟನಾಕಾರರ ನಡುವೆ ನಿಂತು ಪರಿಸ್ಥಿತಿಯನ್ನು ನಿಯಂತ್ರಿಸಿ, ಜಿಲ್ಲಾಧಿಕಾರಿ ಮತ್ತು ರೈತರ ನಡುವಿನ ಮಾತುಕತೆಗೆ ದಾರಿ ಮಾಡಿಕೊಟ್ಟಿದ್ದು ಗಮನ ಸೆಳೆಯಿತು.

## ಆ. 10ರಂದು ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

**ವಿಜಯಸಾಕ್ಷಿ ಸುದ್ದಿ, ಗದಗ**



ಗದಗ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಅವರ ಅಧ್ಯಕ್ಷತೆಯಲ್ಲಿ ಆಗಸ್ಟ್ 10ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ವಿಸಿ ಹಾಲ್ ನಲ್ಲಿ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಯಲಿದೆ.

ಸಭೆಯಲ್ಲಿ ವಿವಿಧ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ, ಫಲಾನುಭವಿಗಳಿಗೆ ಸೇವೆಗಳ ವಿತರಣೆ ಹಾಗೂ ಇಲಾಖಾವಾರು ಕಾರ್ಯನಿರ್ವಹಣೆ ಕುರಿತು ಪರಿಶೀಲನೆ ನಡೆಸಲಾಗುವುದು.

ಈ ಕುರಿತು ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಹಾಗೂ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕುಡಿಯುವ ನೀರಿಗೆ ಮೊದಲ ಆದ್ಯತೆ; ಬರಪೀಡಿತ ಗ್ರಾಮಗಳಿಗೆ ಸಚಿವ ಸಂತೋಷ್ ಲಾಡ್ ಮೂರು ದಿನಗಳ ಪ್ರವಾಸ

# ನೀರಿನ ಸಮಸ್ಯೆಗೆ ಅವಕಾಶ ಕೊಡಬೇಡಿ



**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಮುಂಗಾರು ವೈಫಲ್ಯದ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಅಧಿಕಾರಿಗಳು ಈಗಿನಿಂದಲೇ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಸಂಪುಟ ದರ್ಜೆ ಸಚಿವ ಸಂತೋಷ್ ಎಸ್. ಲಾಡ್ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಬುಧವಾರ ನಡೆದ ಜಿಲ್ಲಾ ಮಟ್ಟದ ಬರ ಪರಿಸ್ಥಿತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕಲಘಟಗಿ ತಾಲೂಕಿನ ವಿವಿಧ ಗ್ರಾಮಗಳಿಗೆ ಈಗಾಗಲೇ ಭೇಟಿ ನೀಡಿದ್ದು, ಗುರುವಾರ ನವಲಗುಂದ, ಅಣ್ಣಿಗೇರಿ ಹಾಗೂ ಕುಂದಗೋಳ, ಆಗಸ್ಟ್ 7ರಂದು ಅಳ್ನಾವರ ತಾಲೂಕಿನ ಬರಪೀಡಿತ ಗ್ರಾಮಗಳಿಗೆ ಭೇಟಿ ನೀಡಿ ಪರಿಸ್ಥಿತಿ ಪರಿಶೀಲಿಸಲಾಗುವುದು ಎಂದು ತಿಳಿಸಿದರು.

ಬೆಳೆ ಸಮೀಕ್ಷೆ ಕಾರ್ಯವನ್ನು ಶೀಘ್ರ ಪೂರ್ಣಗೊಳಿಸಿ, ರೈತರಿಗೆ ಸರ್ಕಾರದ ಯೋಜನೆಗಳ ಲಾಭ ತಲುಪುವಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

> ಬರ ಪರಿಸ್ಥಿತಿಯನ್ನು ಲಘುವಾಗಿ ಪರಿಗಣಿಸಬೇಡಿ. ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಧಿಕಾರಿಗಳು ಮುಂಚಿತವಾಗಿ ಕ್ರಮ ಕೈಗೊಳ್ಳಬೇಕು.
> – **ಸಂತೋಷ ಲಾಡ್,** ಸಂಪುಟ ದರ್ಜೆ ಸಚಿವ

ಸಭೆಯಲ್ಲಿ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಮಾಹಿತಿ ನೀಡಿ, ಜೂನ್ 1ರಿಂದ ಆಗಸ್ಟ್ 5ರವರೆಗೆ ಜಿಲ್ಲೆಯಲ್ಲಿ ವಾಡಿಕೆಯ 299.7 ಮಿ.ಮೀ. ಮಳೆಯ ಬದಲಿಗೆ 196.2 ಮಿ.ಮೀ. ಮಾತ್ರ ಮಳೆಯಾಗಿದ್ದು, ಶೇ.35ರಷ್ಟು ಮಳೆ ಕೊರತೆ ದಾಖಲಾಗಿದೆ ಎಂದರು.

ಜಿಲ್ಲೆಯಲ್ಲಿ ಕೃಷಿ ಬೆಳೆಗಳ 2.71 ಲಕ್ಷ ಹೆಕ್ಟೇರ್ (ಶೇ.96) ಹಾಗೂ ತೋಟಗಾರಿಕೆ ಬೆಳೆಗಳ 16,825 ಹೆಕ್ಟೇರ್ (ಶೇ.74) ಪ್ರದೇಶದಲ್ಲಿ ಬಿತ್ತನೆಯಾಗಿದೆ. ರೈತರಿಗೆ ಅಗತ್ಯ ಪ್ರಮಾಣದ ಬೀಜ ಹಾಗೂ ರಸಗೊಬ್ಬರ ದಾಸ್ತಾನು ಲಭ್ಯವಿದ್ದು, ಯಾವುದೇ ಕೊರತೆ ಇಲ್ಲ ಎಂದು ವಿವರಿಸಿದರು.

ಪ್ರಸ್ತುತ 16 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಿದ್ದು, 18 ಖಾಸಗಿ ಕೊಳವೆಬಾವಿಗಳ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ. ಜಾನುವಾರುಗಳಿಗೆ 43 ವಾರಗಳಿಗೆ ಸಾಕಾಗುವಷ್ಟು ಮೇವು ಲಭ್ಯವಿದ್ದು, ಮುನ್ನೆಚ್ಚರಿಕೆಯಾಗಿ 7 ಮೇವು ಬ್ಯಾಂಕ್‌ಗಳನ್ನು ತೆರೆಯಲು ಸ್ಥಳ ಗುರುತಿಸಲಾಗಿದೆ ಎಂದು ತಿಳಿಸಿದರು.

ಅಧಿಕಾರಿಗಳೊಂದಿಗೆ ಸಭೆ, ಬರಪೀಡಿತ ಪ್ರದೇಶಗಳ ಪರಿಶೀಲನೆ; ಹಾರ-ಸನ್ಮಾನಕ್ಕೆ ನಿಷೇಧ

# ನಾಳೆ ಜಿಲ್ಲೆಯಲ್ಲಿ ಸಚಿವ ರಾಯರಡ್ಡಿ ಪ್ರವಾಸ

**ವಿಜಯಸಾಕ್ಷಿ ಸುದ್ದಿ, ಗದಗ**



ರಾಜ್ಯದ ಸಂಪುಟ ದರ್ಜೆ ಸಚಿವ ಬಸವರಾಜ ರಾಯರಡ್ಡಿ ಅವರು ಆಗಸ್ಟ್ 7ರಿಂದ 9ರವರೆಗೆ ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಬರ ಪರಿಸ್ಥಿತಿ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಿ, ರೈತರೊಂದಿಗೆ ಸಂವಾದ ನಡೆಸಲಿದ್ದಾರೆ.

ಆಗಸ್ಟ್ 7ರಂದು ಬೆಳಿಗ್ಗೆ 10.30ಕ್ಕೆ ಗದಗ ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಲಿರುವ ಸಚಿವರು, ಬಳಿಕ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಬರ ಪರಿಸ್ಥಿತಿ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ. ಮಧ್ಯಾಹ್ನ ರೈತರೊಂದಿಗೆ ಬರಪೀಡಿತ ಪ್ರದೇಶಗಳ ವೀಕ್ಷಣೆ ನಡೆಸಿ, ಬಳಿಕ ಮುಂಡರಗಿ ತಾಲೂಕಿನಲ್ಲಿ ಅಧಿಕಾರಿಗಳು ಹಾಗೂ ರೈತರೊಂದಿಗೆ ಸಭೆ ನಡೆಸಿ ಬರಪೀಡಿತ ಪ್ರದೇಶಗಳನ್ನು ಪರಿಶೀಲಿಸಲಿದ್ದಾರೆ.

ಆಗಸ್ಟ್ 8ರಂದು ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕುಗಳಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ರೈತರೊಂದಿಗೆ ಬರಪೀಡಿತ ಪ್ರದೇಶಗಳ ವೀಕ್ಷಣೆ ನಡೆಸಲಿದ್ದಾರೆ. ಬಳಿಕ ರೋಣ ಹಾಗೂ ಗಜೇಂದ್ರಗಡ ತಾಲೂಕುಗಳಲ್ಲಿಯೂ ಇದೇ ರೀತಿಯ ಸಭೆ ಹಾಗೂ ಸ್ಥಳ ಪರಿಶೀಲನೆ ನಡೆಸಿ ಧಾರವಾಡದಲ್ಲಿ ವಾಸ್ತವ್ಯ ಮಾಡಲಿದ್ದಾರೆ.

ಆಗಸ್ಟ್ 9ರಂದು ನರಗುಂದ ತಾಲೂಕಿನಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ರೈತರೊಂದಿಗೆ ಬರಪೀಡಿತ ಪ್ರದೇಶಗಳ ವೀಕ್ಷಣೆ ನಡೆಸಲಿದ್ದಾರೆ.

ಸಚಿವರ ಪ್ರವಾಸದ ಸಂದರ್ಭದಲ್ಲಿ ಸರ್ಕಾರಿ ಕಚೇರಿಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಹಾರ, ಸನ್ಮಾನ ಸೇರಿದಂತೆ ಯಾವುದೇ ಗೌರವ ಸಮಾರಂಭಗಳನ್ನು ಆಯೋಜಿಸಬಾರದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಸ್ವಚ್ಛತೆ, ಪೌಷ್ಟಿಕ ಆಹಾರ, ಮೂಲಸೌಕರ್ಯಕ್ಕೆ ಆದ್ಯತೆ ನೀಡಲು ಕೆ.ಎನ್. ಪಣೀಂದ್ರ ಸೂಚನೆ

# ವಿದ್ಯಾರ್ಥಿನಿಲಯಗಳಿಗೆ ಉಪಲೋಕಾಯುಕ್ತರ ದಿಢೀರ್ ದಾಳಿ



**ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿನಿಯರಿಗೆ ಗುಣಮಟ್ಟದ ಆಹಾರ, ಸ್ವಚ್ಛತೆ ಹಾಗೂ ಅಗತ್ಯ ಮೂಲಸೌಕರ್ಯಗಳನ್ನು ಸಮರ್ಪಕವಾಗಿ ಒದಗಿಸುವಲ್ಲಿ ಯಾವುದೇ ನಿರ್ಲಕ್ಷ್ಯ ಸಲ್ಲದು ಎಂದು ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಪಣೀಂದ್ರ, ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಬುಧವಾರ ರಾತ್ರಿ, ನಗರದಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ದಿಢೀರ್ ಭೇಟಿ ನೀಡಿ, ಕೊಠಡಿಗಳು, ಅಡುಗೆಮನೆ, ಊಟದ ವ್ಯವಸ್ಥೆ, ಶೌಚಾಲಯ ಹಾಗೂ ಇತರ ಸೌಲಭ್ಯಗಳನ್ನು ಪರಿಶೀಲಿಸಿದರು. ಬಳಿಕ ವಿದ್ಯಾರ್ಥಿನಿಯರೊಂದಿಗೆ ನೇರ ಸಂವಾದ ನಡೆಸಿ ಸಮಸ್ಯೆಗಳನ್ನು ಆಲಿಸಿದರು.

ಪರಿಶೀಲನೆ ವೇಳೆ ಪ್ಯಾಡ್ ಬರ್ನ್ ಯಂತ್ರ ದುರಸ್ತಿಯಲ್ಲಿರುವುದು ಕಂಡುಬಂದ ಹಿನ್ನೆಲೆಯಲ್ಲಿ ಅದನ್ನು ತಕ್ಷಣ ಸರಿಪಡಿಸುವಂತೆ ಸೂಚಿಸಿದರು. ವಿದ್ಯಾರ್ಥಿನಿಯರಲ್ಲಿ ಓದುವ ಅಭ್ಯಾಸ ಬೆಳೆಸಲು ರಾಜ್ಯ ಹಾಗೂ ರಾಷ್ಟ್ರೀಯ ಮಟ್ಟದ ದಿನಪತ್ರಿಕೆಗಳನ್ನು ನಿಯಮಿತವಾಗಿ ಒದಗಿಸುವಂತೆ, ಕಂಪ್ಯೂಟರ್‌ಗಳ ಸಂಖ್ಯೆಯನ್ನು ಹೆಚ್ಚಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬಳಿಕ ಟಿಪ್ಪು ವೃತ್ತದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಕ್ಕೂ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಕುಡಿಯುವ ನೀರಿನ ಸಮಸ್ಯೆ, ಇಲಿಗಳ ಕಾಟ, ದಿನಪತ್ರಿಕೆ, ಗ್ರಂಥಾಲಯ ಹಾಗೂ ಕಂಪ್ಯೂಟರ್ ಕೊರತೆ ಕುರಿತು ವಿದ್ಯಾರ್ಥಿನಿಯರಿಂದ ಮಾಹಿತಿ ಪಡೆದರು. ಈ ಎಲ್ಲ ಸಮಸ್ಯೆಗಳನ್ನು ಶೀಘ್ರ ಬಗೆಹರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ವಿದ್ಯಾರ್ಥಿನಿಯರನ್ನು ಉದ್ದೇಶಿಸಿ ಮಾತನಾಡಿದ ಅವರು, ವಿದ್ಯಾಭ್ಯಾಸದ ಜೊತೆಗೆ ಪ್ರಾಮಾಣಿಕತೆ, ಶಿಸ್ತು ಮತ್ತು ಉತ್ತಮ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು. ಮುಂದೆ ಉದ್ಯೋಗಕ್ಕೆ ಸೇರಿದಾಗ ಲಂಚ ಪಡೆಯುವುದಿಲ್ಲ, ಲಂಚ ನೀಡುವುದಿಲ್ಲ ಎಂಬ ಸಂಕಲ್ಪ ಮಾಡಬೇಕು ಎಂದು ಕರೆ ನೀಡಿದರು.

> ವಿದ್ಯಾರ್ಥಿನಿಲಯಗಳಲ್ಲಿ ಸ್ವಚ್ಛತೆ, ಗುಣಮಟ್ಟದ ಆಹಾರ ಮತ್ತು ಮೂಲಸೌಕರ್ಯಗಳಿಗೆ ಮೊದಲ ಆದ್ಯತೆ ನೀಡಬೇಕು. ವಿದ್ಯಾರ್ಥಿನಿಯರ ಸಮಸ್ಯೆಗಳನ್ನು ವಿಳಂಬವಿಲ್ಲದೆ ಪರಿಹರಿಸಬೇಕು.
> – **ಕೆ.ಎನ್. ಪಣೀಂದ್ರ,** ಉಪಲೋಕಾಯುಕ್ತ ನ್ಯಾಯಮೂರ್ತಿ

ಪರಿಶೀಲನೆ ವೇಳೆ ಹಿರಿಯ ನ್ಯಾಯಾಧೀಶರು ಹಾಗೂ ಕಾರ್ಯದರ್ಶಿ ಕಿರಣ್ ಪಿ.ಎಂ. ಪಾಟೀಲ, ಸುನೀಲಕುಮಾರ ಆರ್., ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡರ, ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಲೋಕಾಯುಕ್ತ ಎಸ್‌ಪಿ ಸಿದ್ದಲಿಂಗಪ್ಪ, ಡಿವೈಎಸ್‌ಪಿ ಲೋಕೇಶ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಎನ್‌ಎಂಎಂಎಸ್ ಹಾಜರಾತಿ ಇಲ್ಲದಿದ್ದರೆ ಕೂಲಿಗೆ ಕತ್ತರಿ



**ವಿಜಯಸಾಕ್ಷಿ ಸುದ್ದಿ, ಗದಗ**

ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಮತ್ತು ಅಜೀವಿಕಾ ಮಿಷನ್ (ವಿಬಿಜಿರಾಮ್‌ಜಿ) ಯೋಜನೆಯಡಿ ಅಕುಶಲ ಕೂಲಿಕಾರರಿಗೆ ದಿನಕ್ಕೆ ₹382 ಕೂಲಿ ನೀಡಲಾಗುತ್ತಿದ್ದು, ಗ್ರಾಮೀಣ ಪ್ರದೇಶದ ಅರ್ಹ ಕೂಲಿಕಾರರು ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ (ಗ್ರಾಮೀಣ ಉದ್ಯೋಗ) ಕುಮಾರ ಪೂಜಾರ ಹೇಳಿದರು.

ಗದಗ ತಾಲೂಕಿನ ಯಲಿಶಿರೂರ ಗ್ರಾಮದಲ್ಲಿ ವಿಬಿಜಿರಾಮ್‌ಜಿ ಯೋಜನೆಯಡಿ ನಡೆಯುತ್ತಿರುವ ಸಮುದಾಯ ಕಾಮಗಾರಿಗಳನ್ನು ಪರಿಶೀಲಿಸಿ ಮಾತನಾಡಿದ ಅವರು, ಕಾಮಗಾರಿಗಳಲ್ಲಿ ಭಾಗವಹಿಸುವ ಎಲ್ಲ ಕೂಲಿಕಾರರ ಹಾಜರಾತಿಯನ್ನು ಎನ್‌ಎಂಎಂಎಸ್ (ಘಖುಖು) ತಂತ್ರಾಂಶದಲ್ಲಿ ಪ್ರತಿದಿನ ಎರಡು ಬಾರಿ ಕಡ್ಡಾಯವಾಗಿ ದಾಖಲಿಸಬೇಕು ಎಂದು ಸೂಚಿಸಿದರು.

ಕಾಯಕ ಬಂಧುಗಳು ಹಾಗೂ ಕೂಲಿಕಾರರು ಬೆಳಿಗ್ಗೆ 6 ಗಂಟೆಗೆ ಕೆಲಸಕ್ಕೆ ಹಾಜರಾಗಬೇಕು. ಕೂಲಿ ಮೊತ್ತ ₹382ಕ್ಕೆ ಹೆಚ್ಚಳವಾಗಿದ್ದು, ಅಳತೆಗೆ ಅನುಗುಣವಾಗಿ ಕೆಲಸ ಮಾಡಿದರೆ ಮಾತ್ರ ಪೂರ್ಣ ಕೂಲಿ ದೊರೆಯುತ್ತದೆ ಎಂದು ತಿಳಿಸಿದರು. ವಿಬಿಜಿರಾಮ್‌ಜಿ ಯೋಜನೆಯಡಿ ಗ್ರಾಮೀಣ ಬಡ ಅಕುಶಲ ಕಾರ್ಮಿಕರಿಗೆ ಸ್ಥಳೀಯ ಮಟ್ಟದಲ್ಲೇ ಉದ್ಯೋಗ ಒದಗಿಸಲಾಗುತ್ತಿದೆ.

ಕೆರೆ ಅಭಿವೃದ್ಧಿಯಂತಹ ಕಾಮಗಾರಿಗಳಿಂದ ಅಂತರ್ಜಲ ಮಟ್ಟವೂ ಹೆಚ್ಚಳವಾಗಲಿದೆ. ಯೋಜನೆಯಡಿ ಉದ್ಯೋಗ ಚೀಟಿ ಹೊಂದಿರುವ ಪ್ರತಿ ಕುಟುಂಬಕ್ಕೆ ವರ್ಷಕ್ಕೆ 125 ದಿನಗಳ ಉದ್ಯೋಗ ನೀಡಲಾಗುತ್ತಿದ್ದು, ಪುರುಷಮಹಿಳೆ ಎಂಬ ಭೇದವಿಲ್ಲದೆ ಸಮಾನ ಕೂಲಿ ನೀಡಲಾಗುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶಿವಕುಮಾರ ವಾಲಿ, ತಾಪಂ ಐಇಸಿ ಸಂಯೋಜಕ ವೀರೇಶ ಬಸನಗೌಡ್ರ, ತಾಂತ್ರಿಕ ಸಹಾಯಕ ಮಂಜುನಾಥ ತಳವಾರ, ಬಿಲ್ ಕಲೆಕ್ಟರ್ ಪ್ರಕಾಶ ಬೋರಾಣಿ, ಬಿಎಫ್‌ಟಿ ದುರ್ಗಪ್ಪ ಆಲೂರ, ಕಾಯಕ ಬಂಧುಗಳು ಹಾಗೂ ಕೂಲಿಕಾರರು ಉಪಸ್ಥಿತರಿದ್ದರು.

## ಮಹಿಳೆಯರಿಲ್ಲದ ಸಚಿವ ಸಂಪುಟಕ್ಕೆ ಆಕ್ರೋಶ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ರಾಜ್ಯ ಸಚಿವ ಸಂಪುಟದಲ್ಲಿ ಒಬ್ಬ ಮಹಿಳಾ ಶಾಸಕರಿಗೂ ಸಚಿವ ಸ್ಥಾನ ನೀಡದಿರುವುದನ್ನು ಖಂಡಿಸಿ ಅಖಿಲ ಭಾರತ ಜನವಾದಿ ಮಹಿಳಾ ಸಂಘಟನೆಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸರ್ದಾರ್ ಹುಲಿಗೆಮ್ಮ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪತ್ರಿಕಾ ಹೇಳಿಕೆ ನೀಡಿರುವ ಅವರು, ಮಹಿಳೆಯರಿಲ್ಲದ ಸಚಿವ ಸಂಪುಟ ರಚನೆ ಮಹಿಳಾ ವಿರೋಧಿ ಮನೋಭಾವದ ಪ್ರತೀಕವಾಗಿದ್ದು, ಸಂವಿಧಾನ ಬದ್ಧ ಸಮಾನತೆ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾದ ಕ್ರಮವಾಗಿದೆ ಎಂದು ಆರೋಪಿಸಿದರು. ರಾಜ್ಯದ ಒಟ್ಟು ಮತದಾರರಲ್ಲಿ ಶೇ.52ರಷ್ಟು ಮಹಿಳೆಯರಿದ್ದು, ಸರ್ಕಾರ ರಚನೆಯಲ್ಲಿ ಮಹಿಳೆಯರ ಪಾತ್ರ ನಿರ್ಣಾಯಕವಾಗಿದೆ. ಶಿಕ್ಷಣ, ಆರೋಗ್ಯ, ಕೃಷಿ, ಉದ್ಯೋಗ ಹಾಗೂ ಮಹಿಳಾ-ಮಕ್ಕಳ ಕಲ್ಯಾಣ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿ ಮಹಿಳೆಯರ ಕೊಡುಗೆ ಮಹತ್ವದ್ದಾಗಿದ್ದರೂ ಸಚಿವ ಸಂಪುಟದಲ್ಲಿ ಅವರಿಗೆ ಅವಕಾಶ ನೀಡದಿರುವುದು ಮಹಿಳೆಯರನ್ನು ರಾಜಕೀಯ ನಿರ್ಧಾರ ಪ್ರಕ್ರಿಯೆಯಿಂದ ದೂರವಿಡುವ ಪ್ರಯತ್ನವಾಗಿದೆ ಎಂದು ದೂರಿದರು. 2023ರ ವಿಧಾನಸಭಾ ಚುನಾವಣೆಯಲ್ಲಿ ಆಯ್ಕೆಯಾದ 10 ಮಹಿಳಾ ಶಾಸಕರಲ್ಲಿ ಕಾಂಗ್ರೆಸ್‌ನ ನಾಲ್ವರು ಶಾಸಕರಿಗೂ ಸಚಿವ ಸ್ಥಾನ ನೀಡದಿರುವುದು ಪಕ್ಷದ ಮಹಿಳಾ ಸಮಾನತೆಯ ಬದ್ಧತೆಯನ್ನೇ ಪ್ರಶ್ನಿಸುವಂತಾಗಿದೆ ಎಂದು ಹೇಳಿದರು. ಸಂಸತ್ತು ಹಾಗೂ ವಿಧಾನಸಭೆಗಳಲ್ಲಿ ಶೇ.33ರಷ್ಟು ಮಹಿಳಾ ಮೀಸಲಾತಿ ಜಾರಿಗೆ ಮಹಿಳಾ ಸಂಘಟನೆಗಳು ಹೋರಾಟ ನಡೆಸುತ್ತಿರುವ ಸಂದರ್ಭದಲ್ಲಿ ಕರ್ನಾಟಕ ಸಚಿವ ಸಂಪುಟದಲ್ಲಿ ಮಹಿಳೆಯರಿಗೆ ಸ್ಥಾನ ನೀಡದಿರುವುದು ಮಹಿಳಾ ಸಬಲೀಕರಣಕ್ಕೆ ವಿರುದ್ಧವಾದ ನಡೆ ಎಂದು ಟೀಕಿಸಿದರು. ಸಚಿವ ಸಂಪುಟದ ನಿರ್ಧಾರವನ್ನು ಮರುಪರಿಶೀಲಿಸಿ ಮಹಿಳೆಯರಿಗೆ ಸೂಕ್ತ ಹಾಗೂ ನ್ಯಾಯಯುತ ಪ್ರಾತಿನಿಧ್ಯ ನೀಡಬೇಕು ಎಂದು ಸಂಘಟನೆ ಸರ್ಕಾರ ಮತ್ತು ಕಾಂಗ್ರೆಸ್ ಹೈಕಮಾಂಡ್ ಅನ್ನು ಆಗ್ರಹಿಸಿದೆ.

ಸಂಸ್ಕೃತ, ಕನ್ನಡ, ಹಿಂದಿ, ತೆಲುಗು, ತಮಿಳು, ಅಸ್ಸಾಮಿ, ಬೆಂಗಾಲಿ, ನೇಪಾಳಿ ಹಾಗೂ ಒಡಿಯಾದಲ್ಲಿ ಭಕ್ತಿಗೀತೆ ಸಿದ್ಧ | ಮಹೇಶ್ ಮಹದೇವ್ ಸೃಷ್ಟಿಸಿದ 'ಕಾಮಾಖಪ್ರಿಯ' ರಾಗದಲ್ಲಿ ಡಾ. ಪ್ರಿಯದರ್ಶಿನಿ ಗಾಯನ


# ಕಾಮಾಖ್ಯ ದೇವಿಗೆ ಒಂಬತ್ತು ಭಾಷೆಗಳ ಸಂಗೀತ ಸಮರ್ಪಣೆ

**ವಿಜಯಸಾಕ್ಷಿ ಸುದ್ದಿ, ಗುವಾಹಾಟಿ (ಅಸ್ಸಾಂ)**

ವಿಶ್ವಪ್ರಸಿದ್ಧ ಶಕ್ತಿಪೀಠಗಳಲ್ಲಿ ಒಂದಾದ ಅಸ್ಸಾಂನ ಕಾಮಾಖ್ಯ ದೇವಿಗೆ ಅಪರೂಪದ ಸಂಗೀತ ನಮನ ಸಲ್ಲಿಸಲಾಗಿದೆ. ಅಂತರರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತ ಸಂಗೀತ ಸಂಯೋಜಕ ಮಹೇಶ್ ಮಹದೇವ್ ಅವರು ಸೃಷ್ಟಿಸಿದ ನೂತನ ಶಾಸ್ತ್ರೀಯ ರಾಗ ಕಾಮಾಖಪ್ರಿಯದಲ್ಲಿ ಸಂಸ್ಕೃತ ಸ್ತೋತ್ರದೊಂದಿಗೆ ಒಂಬತ್ತು ಭಾಷೆಗಳ ಭಕ್ತಿಗೀತೆಗಳ ಆಲ್ಬಂ ದೇವಿಗೆ ಸಮರ್ಪಿಸಲಾಗಿದೆ.

ಮಹೇಶ್ ಮಹದೇವ್ ಅವರು ಕಾಮಾಖ್ಯ ದೇವಿಯ ಪ್ರೇರಣೆಯಿಂದ ಈ ರಾಗವನ್ನು ರಚಿಸಿದ್ದು, ಇದೇ ರಾಗದಲ್ಲಿ ಸಂಸ್ಕೃತ, ಕನ್ನಡ, ಹಿಂದಿ, ತೆಲುಗು, ತಮಿಳು, ಅಸ್ಸಾಮಿ, ಬೆಂಗಾಲಿ, ನೇಪಾಳಿ ಹಾಗೂ ಒಡಿಯಾ ಭಾಷೆಗಳಲ್ಲಿ ಭಕ್ತಿಗೀತೆಗಳನ್ನು ಸಿದ್ಧಪಡಿಸಿದ್ದಾರೆ.





ಅವರ ಪ್ರಕಾರ, ಕಾಮಾಖ್ಯ ದೇವಿಯ ಕುರಿತ ಆಲೋಚನೆ, ಸ್ನೇಹಿತರ ಪ್ರೇರಣೆ ಹಾಗೂ ದೇವಸ್ಥಾನಕ್ಕೆ ಭೇಟಿ ನೀಡುವ ಸಂದರ್ಭಗಳು ಒಂದಕ್ಕೊಂದು ಬೆಸೆದುಕೊಂಡು ಈ ಸಂಗೀತ ಕೃತಿಯು ರೂಪುಗೊಂಡಿದೆ. ಕರ್ನಾಟಕ ಶಾಸ್ತ್ರೀಯ ಸಂಗೀತದ 20ನೇ ಮೇಳಕರ್ತ 'ನಟಭೈರವಿ'ಯ ಜನ್ಯರಾಗವಾಗಿರುವ 'ಕಾಮಾಖಪ್ರಿಯ' ಭಾರತೀಯ ಸಂಗೀತಕ್ಕೆ ಹೊಸ ಸೇರ್ಪಡೆಯಾಗಿದೆ ಎಂದು ಅವರು ತಿಳಿಸಿದ್ದಾರೆ.

ಈ ನೂತನ ರಾಗದ ಮೊದಲ ಕೃತಿಗೆ ಖ್ಯಾತ ಬಹುಭಾಷಾ ಹಿನ್ನೆಲೆ ಗಾಯಕಿ ಡಾ. ಪ್ರಿಯದರ್ಶಿನಿ ಧ್ವನಿಯಾಗಿದ್ದು, ಒಂಬತ್ತು ಭಾಷೆಗಳಲ್ಲಿ ಹಾಡುವ ಅವಕಾಶ ಹಾಗೂ ಹೊಸ ರಾಗವನ್ನು ಮೊದಲ ಬಾರಿಗೆ ಹಾಡಿರುವುದು ತಮ್ಮ ಸಂಗೀತ ಬದುಕಿನ ಮರೆಯಲಾಗದ ಅನುಭವ ಎಂದು ಹೇಳಿದ್ದಾರೆ.

ಕಾಮಾಖ್ಯ ದೇವಾಲಯದ ಸನ್ನಿಧಿಯಲ್ಲಿ ಕ್ರಿಯೇಟಿವ್ ಡಿವೈಸಸ್ ಸಂಸ್ಥೆಯ ಅಧ್ಯಕ್ಷ ಡಾ. ಬಿ.ಎಂ. ಉಮೇಶ್ ಕುಮಾರ್ ಆಲ್ಬಂ ಅನಾವರಣಗೊಳಿಸಿದರು. ಇದೇ ವೇಳೆ ಮಹೇಶ್ ಮಹದೇವ್ ಅವರು 'ಕಾಮಾಖಪ್ರಿಯ' ರಾಗದ ಸ್ವರಗಳನ್ನು ದೇವಿಯ ಮೂಲ ಉದ್ಭವ ಶಿಲೆಗೆ ಸ್ಪರ್ಶಿಸಿ ದೇವಿಗೆ ಸಮರ್ಪಿಸಿದರು.

ಆಲ್ಬಂನಲ್ಲಿ 'ಜೈ ಜೈ ಮಾ ಕಾಮಾಖ್ಯಾ' (ಒಂಬತ್ತು ಭಾಷೆಗಳಲ್ಲಿ), 'ಕಾಮಾಖ್ಯ ಬೀಜ ಮಂತ್ರ' ಹಾಗೂ 'ಕಾಮಾಖ್ಯಾ ಸ್ತೋತ್ರಂ' ಸೇರಿದಂತೆ ಹಲವು ಭಕ್ತಿಗೀತೆಗಳು ಸೇರಿವೆ. ಶಿವಶಕ್ತಿ ಡಿಜಿಟಲ್ ಮೀಡಿಯಾ ಪ್ರೊಡಕ್ಷನ್ಸ್ ನಿರ್ಮಿಸಿರುವ ಈ ಸಂಗೀತ ಆಲ್ಬಂನ ವೀಡಿಯೊ ಆವೃತ್ತಿ ಶೀಘ್ರದಲ್ಲೇ PM Audios and Entertainments ಯೂಟ್ಯೂಬ್ ಚಾನೆಲ್ ಹಾಗೂ ಪ್ರಮುಖ ಒಟಿಟಿ ವೇದಿಕೆಗಳಲ್ಲಿ ಬಿಡುಗಡೆಯಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

ಹಳೆಯ ವಿದ್ಯಾರ್ಥಿಗಳಿಂದ ಅಪರೂಪದ ಗುರುವಂದನಾ ಸಮಾರಂಭ

# ಗುರುವಂದನೆಗೆ ಸಾಕ್ಷಿಯಾದ ಶತಮಾನದ ಶಾಲೆ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಗುರುವಂದನೆ ಎಂದರೆ ನಮಗೆ ಜ್ಞಾನ, ವಿದ್ಯೆ ಹಾಗೂ ಸಂಸ್ಕಾರವನ್ನು ನೀಡಿದ ಶಿಕ್ಷಕರಿಗೆ ಕೃತಜ್ಞತೆ ಸಲ್ಲಿಸುವ ಪವಿತ್ರ ಸಂಪ್ರದಾಯವಾಗಿದ್ದು, ಭಾರತೀಯ ಗುರು-ಶಿಷ್ಯ ಪರಂಪರೆಯ ಶ್ರೇಷ್ಠ ಸಂಕೇತವಾಗಿದೆ ಎಂದು ನಿಡಗುಂದಿಕೊಪ್ಪ ಶಾಖಾ ಶಿವಯೋಗ ಮಂದಿರದ ಚನ್ನಬಸವ ಸ್ವಾಮೀಜಿ ಹೇಳಿದರು.

ಸಮೀಪದ ನಿಡಗುಂದಿಕೊಪ್ಪ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಳೆಯ ವಿದ್ಯಾರ್ಥಿಗಳಿಂದ ಪ್ರಥಮ ಬಾರಿಗೆ ಆಯೋಜಿಸಿದ್ದ ಗುರುವಂದನಾ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಗುರುಗಳು ಬದುಕಿನ ಕತ್ತಲನ್ನು ಹೋಗಲಾಡಿಸಿ ಜ್ಞಾನದ ಬೆಳಕು ನೀಡುವವರು. ನೈತಿಕತೆ, ಸಂಸ್ಕಾರ ಮತ್ತು ಜೀವನ ಮೌಲ್ಯಗಳನ್ನು ಬೋಧಿಸುವ ಗುರುಗಳು ತಂದೆ-ತಾಯಿಯ ನಂತರ ದೈವಸ್ವರೂಪಿಗಳಾಗಿದ್ದಾರೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಶಿಕ್ಷಕ ಎಂ.ಎನ್. ಸರ್ವಿ ಮಾತನಾಡಿ, ಶಾಲೆಯು ಶತಮಾನದ ಹೊಸ್ತಿಲಲ್ಲಿದ್ದು, ಹಳೆಯ ವಿದ್ಯಾರ್ಥಿಗಳು ತಾವು ಕಲಿತ ಶಾಲೆಯನ್ನು ನೆನೆದು ಗುರುವಂದನಾ ಸಮಾರಂಭ ಆಯೋಜಿಸಿರುವುದು ಶ್ಲಾಘನೀಯ ಎಂದರು. ಶಾಲೆಯ ಇತಿಹಾಸವನ್ನು ವಿವರಿಸಿದ ಅವರು, 1934ರಲ್ಲಿ ಗುರುಮಠದಲ್ಲಿ ಶಾಲೆ ಆರಂಭವಾಗಿ, ಬಳಿಕ ಶಾಶ್ವತ ಕಟ್ಟಡ ನಿರ್ಮಾಣಗೊಂಡ ಹಿನ್ನೆಲೆಯನ್ನು ವಿವರಿಸಿದರು.

ಹಳೆಯ ವಿದ್ಯಾರ್ಥಿ ಶರಣಯ್ಯ ಹಿರೇಮಠ ಮಾತನಾಡಿ, ಶಾಲೆಯಲ್ಲಿ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರ ಕೊರತೆ ಎದುರಾಗಿದ್ದು, ಕೇವಲ ಒಬ್ಬ ಖಾಯಂ ಶಿಕ್ಷಕರಿಂದಲೇ ಕಾರ್ಯನಿರ್ವಹಿಸಲಾಗುತ್ತಿದೆ. ಉಳಿದ ತರಗತಿಗಳಿಗೆ ಅತಿಥಿ ಶಿಕ್ಷಕರು ಪಾಠ ಮಾಡುತ್ತಿರುವುದರಿಂದ ಶೈಕ್ಷಣಿಕ ಗುಣಮಟ್ಟಕ್ಕೆ ಧಕ್ಕೆಯಾಗುತ್ತಿದೆ. ಸಂಬಂಧಿಸಿದ ಅಧಿಕಾರಿಗಳು ತಕ್ಷಣ ಹೆಚ್ಚುವರಿ ಶಿಕ್ಷಕರನ್ನು ನೇಮಿಸಿ ಶತಮಾನದ ಹೊಸ್ತಿಲಲ್ಲಿರುವ ಶಾಲೆಯನ್ನು ಉಳಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾದೇವಪ್ಪ ಸರ್ವಿ, ಪಿ.ವಿ. ಸರ್ವಿ, ಬಿ.ಎ. ಬನ್ನಿಗೋಳ, ಮುಖ್ಯ ಶಿಕ್ಷಕ ಎಲ್.ಎಸ್. ದೊಡ್ಡಮನಿ, ಎಸ್‌ಡಿಎಂಸಿ ಅಧ್ಯಕ್ಷ ಎಂ.ಎಸ್. ಜೀರಗಿ, ಜೆ.ಎಚ್. ಮುಲ್ಲಾ, ವಿ. ಮನೋಹರ, ಸುರೇಖಾ ಕಬಲಶೆಟ್ಟಿ, ಡಿ.ಎಸ್. ಗಂಗನಗೌಡ ಸೇರಿದಂತೆ ಹಳೆಯ ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಇದ್ದರು.

# ಪ್ರಸಕ್ತ ಬೆಳೆ ಹಾನಿಗೂ ಪರಿಹಾರ ನೀಡಲು ರೈತ ಸಂಘ ಆಗ್ರಹ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ವಿ.ಆರ್. ನಾರಾಯಣರೆಡ್ಡಿ ಬಣ) ನಡೆಸಿದ ನಿರಂತರ ಹೋರಾಟದ ಫಲವಾಗಿ ಗದಗ ಜಿಲ್ಲೆಗೆ 2025-26ನೇ ಸಾಲಿನ ಮುಂಗಾರು ಹಂಗಾಮಿನ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ₹78 ಕೋಟಿ ಬೆಳೆ ವಿಮೆ ಪರಿಹಾರ ಮಂಜೂರಾಗಿದೆ ಎಂದು ಸಂಘದ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ ತಿಳಿಸಿದ್ದಾರೆ.

ಪ್ರಕಟಣೆ ನೀಡಿರುವ ಅವರು, ಹತ್ತಿ, ಶೇಂಗಾ, ಮೆಕ್ಕೆಜೋಳ, ಈರುಳ್ಳಿ, ತೊಗರಿ, ಭತ್ತ ಹಾಗೂ ಸಜ್ಜೆ ಬೆಳೆಗಳಿಗೆ ಉಂಟಾದ ನಷ್ಟಕ್ಕೆ ಸರ್ಕಾರ ಪರಿಹಾರ ಬಿಡುಗಡೆ ಮಾಡಿರುವುದು ಸ್ವಾಗತಾರ್ಹ. ಇದಕ್ಕಾಗಿ ರಾಜ್ಯ ಸರ್ಕಾರ ಹಾಗೂ ಜಿಲ್ಲಾಡಳಿತಕ್ಕೆ ರೈತರ ಪರವಾಗಿ ಕೃತಜ್ಞತೆ ಸಲ್ಲಿಸುತ್ತೇವೆ. ಇದು ರೈತ ಸಂಘದ ನಿರಂತರ ಹೋರಾಟದ ಫಲ ಎಂದು ಹೇಳಿದ್ದಾರೆ.



ಆದರೆ, ಪ್ರಸ್ತುತ ಮುಂಗಾರು ಹಂಗಾಮಿನಲ್ಲಿ ವ್ಯಾಪಕ ಬೆಳೆ ಹಾನಿಯಾಗಿದ್ದು, ಕೂಡಲೇ ಸಮೀಕ್ಷೆ ನಡೆಸಿ ರೈತರಿಗೆ ಪರಿಹಾರ ಬಿಡುಗಡೆ ಮಾಡಬೇಕು ಎಂದು ಅವರು ಆಗ್ರಹಿಸಿದರು.

ಸಾವಿರಾರು ರೈತರಿಗೆ ಬೆಳೆ ವಿಮೆ ಪರಿಹಾರ ದೊರೆಯುವಂತೆ ಹೋರಾಟ ನಡೆಸಿದ್ದೇವೆ. ಇನ್ನೂ ಬಾಕಿ ಇರುವ ರೈತರ ಬೇಡಿಕೆಗಳ ಈಡೇರಿಕೆಗೆ ಸಂಘದ ಹೋರಾಟ ಮುಂದುವರಿಯಲಿದೆ ಎಂದು ಯಲ್ಲಪ್ಪ ಎಚ್. ಬಾಬರಿ ಹೇಳಿದರು.

# ಗದಗ ರೈಲು ನಿಲ್ದಾಣದಲ್ಲಿ ಅಪರಿಚಿತ ವೃದ್ಧನ ಶವ ಪತ್ತೆ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ರೈಲು ನಿಲ್ದಾಣದಲ್ಲಿ ಸುಮಾರು 65ರಿಂದ 70 ವರ್ಷದ ಅಪರಿಚಿತ ವೃದ್ಧನ ಶವ ಪತ್ತೆಯಾಗಿದ್ದು, ವಾರಸುದಾರರ ಪತ್ತೆಗೆ ಗದಗ ರೈಲ್ವೆ ಪೊಲೀಸರು ಸಾರ್ವಜನಿಕರ ಸಹಕಾರ ಕೋರಿದ್ದಾರೆ.

ಆಗಸ್ಟ್ 4ರಂದು ರೈಲು ನಿಲ್ದಾಣದಲ್ಲಿ ಅಪರಿಚಿತ ವ್ಯಕ್ತಿಯೊಬ್ಬರು ದೀರ್ಘಕಾಲದ ಅನಾರೋಗ್ಯದಿಂದ ಮಲಗಿದಲ್ಲಿಯೇ ಸಹಜವಾಗಿ ಮೃತಪಟ್ಟಿರುವ ಶಂಕೆ ವ್ಯಕ್ತವಾಗಿದ್ದು, ಈ ಸಂಬಂಧ ಗದಗ ರೈಲ್ವೆ ಪೊಲೀಸ್ ಠಾಣೆಯಲ್ಲಿ ಯುಡಿಆರ್ ನಂ. 34/2026ರಡಿ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿದೆ. ಮೃತ ವ್ಯಕ್ತಿ ಸುಮಾರು 5.3 ಅಡಿ ಎತ್ತರ, ಸಾಧಾರಣ ಗೋಧಿ ಮೈಬಣ್ಣ, ತೆಳ್ಳನೆಯ ಮೈಕಟ್ಟು, ಕೋಲು ಮುಖ, ಅಗಲವಾದ ಹಣೆ, ಉದ್ದ ಮೂಗು ಹೊಂದಿದ್ದು, ತಲೆಯಲ್ಲಿ ಕಪ್ಪು-ಬಿಳಿ ಮಿಶ್ರಿತ 3-4 ಇಂಚು ಉದ್ದದ ಕೂದಲು ಹಾಗೂ ಕಪ್ಪು-ಬಿಳಿ ಮಿಶ್ರಿತ ಮೀಸೆ-ಗಡ್ಡ ಹೊಂದಿದ್ದಾರೆ.



ಮೃತರು ಹಸಿರು ಬಣ್ಣದ ಫುಲ್ ಶರ್ಟ್, ಕಪ್ಪು ಬಣ್ಣದ ಪ್ಯಾಂಟ್ ಹಾಗೂ ಕಡುನೀಲಿ ಬಣ್ಣದ ಜರ್ಕಿನ್ ಧರಿಸಿದ್ದರು.

ಈ ವ್ಯಕ್ತಿಯ ಬಗ್ಗೆ ಮಾಹಿತಿ ಇರುವವರು ಅಥವಾ ವಾರಸುದಾರರು ಗದಗ ರೈಲ್ವೆ ಪೊಲೀಸ್ ಠಾಣೆ (ದೂ. 08372-278744), ಮೊಬೈಲ್: 9480802128 ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ (080-22871291) ಸಂಪರ್ಕಿಸುವಂತೆ ರೈಲ್ವೆ ಪೊಲೀಸ್ ಠಾಣೆಯ ಪೊಲೀಸರು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ಮೂಲಸೌಲಭ್ಯ ಕಲ್ಪಿಸುವಂತೆ ಶಾಸಕ ಸಿ.ಸಿ. ಪಾಟೀಲರಿಗೆ ಮನವಿ

**ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ನರಸಾಪೂರ ಗ್ರಾಮದ ಖಾದಿ ನಗರಕ್ಕೆ ಸಿಹಿನೀರಿನ ವ್ಯವಸ್ಥೆ, ಸಿಸಿ ರಸ್ತೆ, ಚರಂಡಿ ಹಾಗೂ ಇತರೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಒತ್ತಾಯಿಸಿ ನಾಗರಿಕ ಹಿತರಕ್ಷಣಾ ಸಮಿತಿ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಶಾಸಕ ಸಿ.ಸಿ. ಪಾಟೀಲ ಅವರಿಗೆ ಮನವಿ ಸಲ್ಲಿಸಿದರು.

ಶ್ರೀ ವರಸಿದ್ಧಿ ವಿನಾಯಕ ದೇವಸ್ಥಾನದ ಸಮುದಾಯ ಭವನಕ್ಕೆ ಭೇಟಿ ನೀಡಿದ ವೇಳೆ ಮನವಿ ಸ್ವೀಕರಿಸಿದ ಶಾಸಕ ಸಿ.ಸಿ. ಪಾಟೀಲ ಅವರಿಗೆ ಸಾರ್ವಜನಿಕರು, ಅಂಗನವಾಡಿ ರಸ್ತೆಯು ಸಂಪೂರ್ಣ ಹಾಳಾಗಿದ್ದು ಮಕ್ಕಳು ಹಾಗೂ ವೃದ್ಧರ ಸಂಚಾರಕ್ಕೆ ತೀವ್ರ ತೊಂದರೆಯಾಗುತ್ತಿದೆ. ಒಳಬಡಾವಣೆಯ ರಸ್ತೆಗಳು ಹದಗೆಟ್ಟಿದ್ದು, ಚರಂಡಿ ಕಾಮಗಾರಿ ಅರ್ಧಕ್ಕೆ ನಿಂತಿದೆ. ನಿರ್ಮಾಣಗೊಂಡಿರುವ ಸಿಸಿ ರಸ್ತೆಯ ಎರಡೂ ಬದಿಗಳಲ್ಲಿ ಚರಂಡಿ ನಿರ್ಮಿಸಬೇಕಿದೆ ಎಂದು ಗಮನ ಸೆಳೆದರು.

ಇದೇ ವೇಳೆ ಖಾದಿ ನಗರದ ಸಮೀಪದ ಬುದ್ಧಿಮಾಂದ್ಯ ಶಾಲೆ ಎದುರಿನ ಬಡಾವಣೆಯಲ್ಲಿ ರಸ್ತೆ, ಒಳಚರಂಡಿ ಹಾಗೂ ಬೀದಿದೀಪಗಳ ಸಮರ್ಪಕ ವ್ಯವಸ್ಥೆ ಇಲ್ಲದಿರುವುದರಿಂದ ನಿವಾಸಿಗಳು ಸಮಸ್ಯೆ ಎದುರಿಸುತ್ತಿದ್ದಾರೆ ಎಂದು ತಿಳಿಸಿ ಶೀಘ್ರ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು. ಮನವಿ ಸ್ವೀಕರಿಸಿದ ಶಾಸಕ ಸಿ.ಸಿ. ಪಾಟೀಲ, ಖಾದಿ ನಗರಕ್ಕೆ ಸಿಹಿನೀರಿನ ವ್ಯವಸ್ಥೆ ಸೇರಿದಂತೆ ಸಿಸಿ ರಸ್ತೆ ಮತ್ತು ಅಗತ್ಯ ಮೂಲಸೌಲಭ್ಯಗಳನ್ನು ಹಂತ ಹಂತವಾಗಿ ಕಲ್ಪಿಸಲಾಗುವುದು ಎಂದು ಭರವಸೆ ನೀಡಿದರು.



ಈ ಸಂದರ್ಭದಲ್ಲಿ ಉಮೇಶಗೌಡ ಪಾಟೀಲ, ವಸಂತ ಮೇಟಿ, ನಾಗರಿಕ ಹಿತರಕ್ಷಣಾ ಸಮಿತಿ ಅಧ್ಯಕ್ಷ ಕಲ್ಲಯ್ಯ ಹಿರೇಮಠ, ಪ್ರಕಾಶ ಕೆರಕನವರ, ಬಸವರಾಜ ಕಿತ್ತೂರ, ರಾಜು ಮಲಗಾವಿ, ರಾಜು ವಿಭೂತಿಮಠ, ಮಲ್ಲಿಕಾರ್ಜುನ ದೊಡ್ಡಮನಿ, ಹನುಮಂತ ಭಾವಿಕಟ್ಟಿ, ವೀರಬಸಯ್ಯ ವಿರಕ್ತಮಠ, ಪಿಡಿಒ ಸುರೇಶ ಲಮಾಣಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸನ್ಮಾನಕ್ಕಿಂತ ಸಂಸ್ಕಾರ, ಸಂಸ್ಕೃತಿಯೇ ಜೀವನದ ನಿಜವಾದ ಆಭರಣ



**ವಿಜಯಸಾಕ್ಷಿ ಸುದ್ದಿ, ಹರಿಹರ**

ಸತ್ಯದ ಹಾದಿಯಲ್ಲಿ ಸಂಕಷ್ಟಗಳು ಸಹಜ. ಮನುಷ್ಯನಿಗೆ ಮಾನ-ಸನ್ಮಾನಕ್ಕಿಂತ ಸಂಸ್ಕಾರ ಮತ್ತು ಸಂಸ್ಕೃತಿಯೇ ಮುಖ್ಯ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದ ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯರು ಹೇಳಿದರು.

ನಗರದ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂದಿರದಲ್ಲಿ ನಡೆದ ಜನಜಾಗೃತಿ ಧರ್ಮ ಸಮಾರಂಭದ ಎರಡನೇ ದಿನದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಆಧ್ಯಾತ್ಮಿಕ ಅರಿವು ಮತ್ತು ಆಚರಣೆಗಳಿಂದಲೇ ಸಂತಸದ ಬದುಕು ಸಾಧ್ಯ. ಭವ್ಯ ಕಟ್ಟಡಗಳಿಗಿಂತ ಮಾನವೀಯ ಮೌಲ್ಯಗಳು ಎತ್ತರವಾಗಿರಬೇಕು.

ಕೈಲಾಸಕ್ಕಿಂತ ಕಾಯಕ, ಧರ್ಮಕ್ಕಿಂತ ದಯೆ, ಭೌತಿಕ ಆಸ್ತಿಗಿಂತ ಆಧ್ಯಾತ್ಮಿಕ ಸಂಪತ್ತು ಶ್ರೇಷ್ಠ ಎಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಾಳೆಹೊನ್ನೂರಿನಲ್ಲಿ ನಡೆಯಲಿರುವ 35ನೇ ಶ್ರಾವಣ ಮಾಸೋತ್ಸವದ ಆಹ್ವಾನ ಪತ್ರಿಕೆಯನ್ನು ಜಗದ್ಗುರುಗಳು ಬಿಡುಗಡೆಗೊಳಿಸಿದರು.

ಮಾಜಿ ಶಾಸಕ ಹೆಚ್.ಎಸ್. ಶಿವಶಂಕರ್ ಮಾತನಾಡಿ, ದ್ವೇಷ ತೊರೆದು ಸದ್ವಿಚಾರಗಳ ಹಾದಿಯಲ್ಲಿ ನಡೆದಾಗ ಮಾತ್ರ ಜೀವನ ಸಾರ್ಥಕವಾಗುತ್ತದೆ ಎಂದರು. ಅವಧೂತ ಕವಿ ಗುರುರಾಜ ಗುರೂಜಿ ಆಶಾವಾದದ ಬದುಕಿನ ಮಹತ್ವವನ್ನು ತಿಳಿಸಿದರೆ, ಮಳಲಿ ಸಂಸ್ಥಾನಮಠದ ಡಾ. ನಾಗಭೂಷಣ ಶಿವಾಚಾರ್ಯರು ಸಹನೆ ಮತ್ತು ಸಾಧನೆಯೇ ಜೀವನದ ಯಶಸ್ಸಿನ ಮಂತ್ರ ಎಂದು ಹೇಳಿದರು. ಹಂಪಸಾಗರದ ಶಿವಲಿಂಗ ರುದ್ರಮುನಿ ಶಿವಾಚಾರ್ಯರು ಧರ್ಮದ ತತ್ವಗಳು ಬದುಕಿಗೆ ದಾರಿದೀಪವಾಗಿವೆ ಎಂದರು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳ ಗಣ್ಯರಿಗೆ ಶ್ರೀಗುರುರಕ್ಷೆ ನೀಡಿ ಜಗದ್ಗುರುಗಳು ಆಶೀರ್ವದಿಸಿದರು. ಕುಮಾರಿ ನಿಧಿಶ್ರೀ ಹಾಗೂ ನಿಹಾರಿಕಾ ಹಿರೇಮಠ ಅವರಿಂದ ಭರತನಾಟ್ಯ ಮತ್ತು ಕಾಂತರಾಜವೀರೇಶ ತಂಡದಿಂದ ಸಂಗೀತ ಕಾರ್ಯಕ್ರಮ ನಡೆಯಿತು. ಬೆಳಿಗ್ಗೆ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜೆ ನೆರವೇರಿಸಿ ಭಕ್ತರಿಗೆ ಆಶೀರ್ವಾದ ನೀಡಿದರು. ಬಳಿಕ ಅನ್ನದಾಸೋಹ ಸೇವೆ ನಡೆಯಿತು.

# ಕೂಲಿ ಕಾರ್ಮಿಕರಿಗೆ ಆರೋಗ್ಯ ತಪಾಸಣೆ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿ ತಾಲೂಕಿನ ವಡವಿ ಗ್ರಾಮ ಪಂಚಾಯಿತಿ ವತಿಯಿಂದ ಅಲಗಿಲವಾಡ ಗ್ರಾಮದ ಕೂಲಿ ಕಾರ್ಮಿಕರಿಗೆ ಆರೋಗ್ಯ ತಪಾಸಣೆ ನಡೆಸುವ ಮೂಲಕ ವಿ.ಬಿ.ಜಿಆರ್ ಎಎಂಜಿ (VBG&RAMG) ಯೋಜನೆಯಡಿ ಶ್ರೀ ಮೈಲಾರಲಿಂಗೇಶ್ವರ ಕೆರೆಯ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಲಾಯಿತು.

ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರಾಮಣ್ಣ ದೊಡ್ಡಮನಿ ಅವರ ನಿರ್ದೇಶನದಂತೆ ಕಾಮಗಾರಿ ಆರಂಭಿಸಲಾಗಿದ್ದು, ಪ್ರತಿ ಕುಟುಂಬಕ್ಕೆ 125 ದಿನಗಳ ಉದ್ಯೋಗ ಹಾಗೂ ಪುರುಷ-ಮಹಿಳೆ ಭೇದವಿಲ್ಲದೆ ಪ್ರತಿ ದಿನ ₹382 ಕೂಲಿ ನೀಡಲಾಗುತ್ತಿದೆ. ಉದ್ಯೋಗ ಬಯಸುವ ಕೂಲಿ ಕಾರ್ಮಿಕರು ನಮೂನೆ-6ರಲ್ಲಿ ಅರ್ಜಿ ಸಲ್ಲಿಸುವಂತೆ ಅಧಿಕಾರಿಗಳು ತಿಳಿಸಿದರು.



ಕಾಮಗಾರಿ ಆರಂಭಕ್ಕೂ ಮುನ್ನ ಆರೋಗ್ಯ ಸಿಬ್ಬಂದಿಗಳಾದ ಪ್ರತಿಭಾ ಸಿದ್ದರಡ್ಡಿ ಹಾಗೂ ಮಾಂತೇಶ ತಿಮ್ಮಾಪೂರ ಕೂಲಿ ಕಾರ್ಮಿಕರ ಆರೋಗ್ಯ ತಪಾಸಣೆ ನಡೆಸಿದರು.

ಪ್ರಶಾಂತ ಆರ್. ಕುಲಕರ್ಣಿ (ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು) ಹಾಗೂ ಗ್ರಾಮ ಪಂಚಾಯಿತಿ ಆಡಳಿತಾಧಿಕಾರಿಗಳ ಮಾರ್ಗದರ್ಶನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಅಭಿವೃದ್ಧಿ ಅಧಿಕಾರಿ ಎಚ್.ಟಿ. ತಳವಾರ, ಕಾರ್ಯದರ್ಶಿ ಎ.ಎಂ. ಹಿರೇಮಠ, ಇಂಜಿನಿಯರ್ ಲಿಂಗರಾಜು ಅರಸಿಣದ, ಸಿಬ್ಬಂದಿಗಳಾದ ಮಂಜುನಾಥ ರಾಜೂರ, ಹರೀಶ ಪಾಟೀಲ ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿ ಮತ್ತು ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು.



ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ವತಿಯಿಂದ ಗದಗ ವಿದ್ಯುತ್ ಗುತ್ತಿಗೆದಾರರ ಸಂಘದ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ರವಿ ಗುಡಿಮನಿ ಅವರನ್ನು ಆತ್ಮೀಯವಾಗಿ ಸನ್ಮಾನಿಸಿ ಅಭಿನಂದಿಸಲಾಯಿತು.

# ನೀರಿದ್ದರೆ ನಾಳೆ ಸಂದೇಶ ಸಾರಿದ ವಿದ್ಯಾರ್ಥಿಗಳು

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಜಲಸಂಪನ್ಮೂಲ ಇಲಾಖೆ ಹಾಗೂ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಲಕ್ಷ್ಮೇಶ್ವರದ ಸರ್ಕಾರಿ ಪ್ರೌಢಶಾಲೆಯಲ್ಲಿ ಮಂಗಳವಾರ 'ನೀರಿದ್ದರೆ ನಾಳೆ' ಕಾರ್ಯಕ್ರಮದ ಅಂಗವಾಗಿ 'ಜಲ ಸಂರಕ್ಷಣೆ ಮತ್ತು ಸದ್ಬಳಕೆ' ವಿಷಯದ ಕುರಿತು ತಾಲೂಕುಮಟ್ಟದ ಚಿತ್ರಕಲಾ ಸ್ಪರ್ಧೆ ಹಾಗೂ ಜಾಗೃತಿ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಗದಗ ಜಿಲ್ಲಾ ಅಂತರ್ಜಲ ಕಚೇರಿಯ ಭೂವಿಜ್ಞಾನಿ ಮಲ್ಲಪ್ಪ ಕಲ್ಲಾಪೂರ, ನೀರು ಮಾನವ ಬದುಕಿನ ಮೂಲಾಧಾರವಾಗಿದ್ದು, ಅದರ ಸಂರಕ್ಷಣೆಯಲ್ಲಿ ನಿರ್ಲಕ್ಷ್ಯ ವಹಿಸಿದರೆ ಭವಿಷ್ಯದಲ್ಲಿ ತೀವ್ರ ನೀರಿನ ಬಿಕ್ಕಟ್ಟು ಎದುರಾಗಲಿದೆ ಎಂದು ಎಚ್ಚರಿಸಿದರು. ಶಿಕ್ಷಣ ಸಂಯೋಜಕ ರಾಘವೇಂದ್ರ ಜೋಶಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿವಿಧ ಪ್ರೌಢಶಾಲೆಗಳ ವಿದ್ಯಾರ್ಥಿಗಳು ಚಿತ್ರಕಲಾ ಸ್ಪರ್ಧೆಯಲ್ಲಿ ಭಾಗವಹಿಸಿದ್ದು, ವಿಜೇತರಿಗೆ ನಗದು ಬಹುಮಾನ ವಿತರಿಸಲಾಯಿತು. ಮುಖ್ಯೋಪಾಧ್ಯಾಯ ಬಿ.ಸಿ. ಪಟ್ಟೇದ, ಬಿ.ಎಂ. ಯರಗುಪ್ಪಿ, ಉಮೇಶ ನೇಕಾರ, ಪಿ.ಎಸ್. ಪುರಾಣಮಠ ಸೇರಿದಂತೆ ಶಿಕ್ಷಕರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

# ನಿಧನ

## ಯಲ್ಲಪ್ಪ ತೋಟದ



**ಲಕ್ಷ್ಮೇಶ್ವರ:** ತಾಲೂಕಿನ ಶ್ಯಾಬಳ ಗ್ರಾಮದ ಪ್ರಗತಿಪರ ರೈತ ಹಾಗೂ ಪಂಚಮಸಾಲಿ ಸಮಾಜದ ಹಿರಿಯರಾದ ಯಲ್ಲಪ್ಪ ಮಲ್ಲಪ್ಪ ತೋಟದ (75) ಅವರು ಸೋಮವಾರ ನಿಧನರಾದರು.

ಮೃತರು ಮೂವರು ಪುತ್ರರು, ಒಬ್ಬ ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಅವರ ನಿಧನಕ್ಕೆ ಗ್ರಾಮಸ್ಥರು, ರೈತ ಮುಖಂಡರು ಹಾಗೂ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಸಂತಾಪ ವ್ಯಕ್ತಪಡಿಸಿದ್ದಾರೆ.

# ಅಕ್ರಮ ಮರಳು ದಂಧೆಗೆ ಕಡಿವಾಣ ಹಾಕದಿದ್ದರೆ ಧರಣಿ ಎಚ್ಚರಿಕೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ಲಕ್ಷ್ಮೇಶ್ವರ, ಶಿರಹಟ್ಟಿ ಹಾಗೂ ಮುಂಡರಗಿ ತಾಲೂಕುಗಳಲ್ಲಿ ನಡೆಯುತ್ತಿರುವ ಅಕ್ರಮ ಮರಳು ಗಣಿಗಾರಿಕೆ ಮತ್ತು ಸಾಗಾಣಿಕೆಗೆ ತಕ್ಷಣ ಕಡಿವಾಣ ಹಾಕಬೇಕು. ದಂಧೆಗೆ ಸಹಕಾರ ನೀಡುತ್ತಿರುವ ಅಧಿಕಾರಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಭೀಮ್ ಶಕ್ತಿ ಸಂಘಟನೆ ಪದಾಧಿಕಾರಿಗಳು ಉಪವಿಭಾಗಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಜಿಲ್ಲಾ ಅಧ್ಯಕ್ಷ ಅಣ್ಣಪ್ಪ ಗುತ್ತೆಮ್ಮನವರ, ರಾಜ್ಯಾಧ್ಯಕ್ಷ ಶಂಕರ ಮುಗುಳಿ ಹಾಗೂ ರಾಜ್ಯ ಕಾನೂನು ಸಲಹೆಗಾರ ಮೈಲಾರಪ್ಪ ಡಿ.ಎಚ್. ನೇತೃತ್ವದಲ್ಲಿ ಸಲ್ಲಿಸಿದ ಮನವಿಯಲ್ಲಿ, ಹಲವು ಗ್ರಾಮಗಳ ಹಳ್ಳಗಳಲ್ಲಿ ಕಳೆದ ಕೆಲವು ತಿಂಗಳುಗಳಿಂದ ಅಕ್ರಮವಾಗಿ ಮರಳು ಗಣಿಗಾರಿಕೆ ನಡೆಯುತ್ತಿದ್ದು, ಇದರಿಂದ ಪರಿಸರ ಹಾನಿ, ಅಂತರ್ಜಲ ಮಟ್ಟ ಕುಸಿತ, ರೈತರಿಗೆ ನೀರಾವರಿ ಸಮಸ್ಯೆ ಹಾಗೂ ಗ್ರಾಮೀಣ ರಸ್ತೆಗಳ ಹಾನಿ ಉಂಟಾಗಿದೆ ಎಂದು ಆರೋಪಿಸಲಾಯಿತು. ಒಂದೇ ಪಾಸ್ ಬಳಸಿ ಹಲವು ಬಾರಿ ಮರಳು ಸಾಗಣೆ ಮಾಡಲಾಗುತ್ತಿದ್ದು, ಜಿಪಿಎಸ್ ವ್ಯವಸ್ಥೆಯನ್ನು ದುರುಪಯೋಗಪಡಿಸಿಕೊಂಡು ಅಕ್ರಮ ದಂಧೆ ನಡೆಸಲಾಗುತ್ತಿದೆ. ಸಂಬಂಧಪಟ್ಟ ಕೆಲ ಅಧಿಕಾರಿಗಳು ಕಣ್ಮುಚ್ಚಿ ಕುಳಿತಿರುವುದರಿಂದ ಸರ್ಕಾರಕ್ಕೆ ಆದಾಯ ನಷ್ಟವಾಗುತ್ತಿದೆ ಎಂದು ಸಂಘಟನೆ ಆರೋಪಿಸಿತು. ಕೂಡಲೇ ಜಂಟಿ ದಾಳಿ ನಡೆಸಿ ಅಕ್ರಮ ಮರಳು ದಂಧೆ ತಡೆಗಟ್ಟಬೇಕು. ತಪ್ಪಿತಸ್ಥರು ಹಾಗೂ ಅವರಿಗೆ ಸಹಕಾರ ನೀಡುತ್ತಿರುವ ಕಂದಾಯ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಸಂಬಂಧಿಸಿದ ಇಲಾಖೆಯ ಕಚೇರಿ ಎದುರು ಧರಣಿ ನಡೆಸಲಾಗುವುದು ಎಂದು ರಾಜ್ಯಾಧ್ಯಕ್ಷ ಶಂಕರ ಮುಗುಳಿ ಎಚ್ಚರಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮುತ್ತಪ್ಪ ಮ್ಯಾಗೇರಿ, ಜಿಲ್ಲಾ ಗೌರವಾಧ್ಯಕ್ಷ ಮರಿಯಪ್ಪ ಪೂಜಾರ, ಜಿಲ್ಲಾ ಯುವ ಘಟಕದ ಅಧ್ಯಕ್ಷ ಶಿದ್ದಪ್ಪ ಮಾದರ, ಸಂಘಟನಾ ಕಾರ್ಯದರ್ಶಿ ಮುತ್ತಪ್ಪ ಪೂಜಾರ, ಜಿಲ್ಲಾ ಯುವ ಘಟಕದ ಉಪಾಧ್ಯಕ್ಷ ಕೃಷ್ಣಪ್ಪ ಮರಾಠಿ, ಕಾರ್ಯದರ್ಶಿ ಯಮನಪ್ಪ ಪೂಜಾರ, ಶಿರಹಟ್ಟಿ ತಾಲೂಕು ಅಧ್ಯಕ್ಷ ಕೊಟೆಪ್ಪ ಪೂಜಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬೆಳೆ ಸಂರಕ್ಷಣೆಗೆ ರೈತರಿಗೆ ಕೃಷಿ ಇಲಾಖೆ ಸಲಹೆ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ವಾಡಿಕೆಗಿಂತ ಮಳೆ ಕೊರತೆ ಉಂಟಾಗಿರುವ ಹಿನ್ನೆಲೆಯಲ್ಲಿ ರೈತರು ಮುಂಗಾರು ಬೆಳೆಗಳ ಸಂರಕ್ಷಣೆಗೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಕೃಷಿ ಇಲಾಖೆ ಸಲಹೆ ನೀಡಿದೆ.

ಜಿಲ್ಲೆಯಲ್ಲಿ ಒಟ್ಟಾರೆ ಶೇ.18ರಷ್ಟು ಮಳೆ ಕೊರತೆ ದಾಖಲಾಗಿದ್ದು, ಗದಗ (ಶೇ.32), ಮುಂಡರಗಿ (ಶೇ.19), ರೋಣ (ಶೇ.54), ಶಿರಹಟ್ಟಿ (ಶೇ.6), ಗಜೇಂದ್ರಗಡ (ಶೇ.35) ಹಾಗೂ ಲಕ್ಷ್ಮೇಶ್ವರ (ಶೇ.6) ತಾಲೂಕುಗಳಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿದೆ. ಇದರಿಂದ ಹೆಸರು, ಉದ್ದು, ಹತ್ತಿ, ಮೆಕ್ಕೆಜೋಳ ಹಾಗೂ ಜೋಳ ಸೇರಿದಂತೆ 20-25 ದಿನಗಳ ಬೆಳೆಗಳಲ್ಲಿ ತೇವಾಂಶದ ಕೊರತೆ ಕಂಡುಬಂದಿದೆ. ಜೋಳದಲ್ಲಿ ಸಸಿಗಳ ಸಂಖ್ಯೆ ಶೇ.30ಕ್ಕಿಂತ ಕಡಿಮೆ ಇದ್ದರೆ ಮರುಬಿತ್ತನೆ ಮಾಡಬೇಕು. ಹೆಸರು ಮತ್ತು ಉದ್ದು ಬೆಳೆಯಲ್ಲಿ ಸಸಿಗಳ ವಿರಳೀಕರಣ ಮಾಡಿ ಶೇ.2ರ ಯೂರಿಯಾ ದ್ರಾವಣವನ್ನು ಎಲೆಗಳಿಗೆ ಸಿಂಪಡಿಸಬೇಕು. ಮೆಕ್ಕೆಜೋಳದಲ್ಲಿ ಖಾಲಿ ಜಾಗ ತುಂಬುವುದು ಹಾಗೂ ಮೊಳಕೆಗೆ ಮುನ್ನ ಕಳೆನಾಶಕ ಸಿಂಪಡಿಸುವಂತೆ ಇಲಾಖೆ ತಿಳಿಸಿದೆ. ಸಾಧ್ಯವಾದಲ್ಲಿ ಜೀವ ರಕ್ಷಕ ನೀರಾವರಿ ಒದಗಿಸುವುದು, ಮಣ್ಣಿನ ತೇವಾಂಶ ಕಾಪಾಡಲು ಮಲ್ಚಿಂಗ್ (ಹೊದಿಕೆ) ವಿಧಾನ ಅಳವಡಿಸುವುದು, ಕಳೆ ನಿಯಂತ್ರಣ ಹಾಗೂ ಎಡೆಕುಂಟೆ ಹೊಡೆಯುವ ಮೂಲಕ ಮಣ್ಣಿನ ತೇವಾಂಶ ಸಂರಕ್ಷಿಸುವಂತೆ ರೈತರಿಗೆ ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ಕೃಷಿ ಇಲಾಖೆಯ ಅಧಿಕಾರಿಗಳನ್ನು ಸಂಪರ್ಕಿಸುವಂತೆ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯ, ಜಿಲ್ಲಾ ಮಟ್ಟದ ಶಿಕ್ಷಕರ ಪ್ರಶಸ್ತಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಹೊಳೆಆಲೂರ**

ಹೊಳೆಆಲೂರದ ಎಸ್.ಎಸ್. ಆಡಿನ ಜನಸೇವಾ ಸಂಸ್ಥೆ (ರಿ.) ವತಿಯಿಂದ 202627ನೇ ಸಾಲಿನ ಶಿಕ್ಷಕರ ದಿನಾಚರಣೆ ಅಂಗವಾಗಿ ರಾಜ್ಯ ಹಾಗೂ ಜಿಲ್ಲಾ ಮಟ್ಟದ ಶಿಕ್ಷಕರ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಆಯೋಜಿಸಲಾಗಿದ್ದು, ಅರ್ಹ ಶಿಕ್ಷಕರು ಹಾಗೂ ಉಪನ್ಯಾಸಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಪ್ರಾಥಮಿಕ, ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ, ಕನಿಷ್ಠ ಐದು ವರ್ಷಗಳ ಸೇವಾನುಭವ ಹೊಂದಿರುವ ಶಿಕ್ಷಕರು ಹಾಗೂ ಉಪನ್ಯಾಸಕರು ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿದಾರರು ತಮ್ಮ ಪೂರ್ಣ ವಿವರ, ಶಾಲೆಯ ಮುಖ್ಯೋಪಾಧ್ಯಾಯರು ಅಥವಾ ಸಂಸ್ಥೆಯ ಮುಖ್ಯಸ್ಥರಿಂದ ದೃಢೀಕರಣ ಪತ್ರ, ವಿನೂತನ ಬೋಧನಾ ವಿಧಾನಗಳು ಹಾಗೂ ಕಲಿಕಾ ಚಟುವಟಿಕೆಗಳ ವಿವರ ಮತ್ತು ನಿಮಗೆ ಏಕೆ ಪ್ರಶಸ್ತಿ ನೀಡಬೇಕು? ಎಂಬ ವಿಷಯದ ಕುರಿತು ತಮ್ಮ ಸಾಧನೆ ಹಾಗೂ ಸೇವೆಯನ್ನು ವಿವರಿಸುವ ಸಮರ್ಥನಾ ವರದಿಯನ್ನು ಸಲ್ಲಿಸಬೇಕು.

ಅಗತ್ಯ ದಾಖಲೆಗಳನ್ನು ಪಿಡಿಎಫ್ ರೂಪದಲ್ಲಿ ಸಿದ್ಧಪಡಿಸಿ ಆಗಸ್ಟ್ 20ರೊಳಗೆ 9019891346 ಸಂಖ್ಯೆಗೆ ವಾಟ್ಸ್‌ಆ್ಯಪ್ ಮೂಲಕ ಕಳುಹಿಸಬೇಕು. ಪ್ರಶಸ್ತಿ ಪ್ರದಾನ ಸಮಾರಂಭದ ದಿನಾಂಕ ಹಾಗೂ ಸ್ಥಳವನ್ನು ನಂತರ ಪ್ರಕಟಿಸಲಾಗುವುದು ಎಂದು ಸಂಸ್ಥೆಯ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಳೆ ಕೊರತೆಯಿಂದ ಒಣಗಿದ ಹೊಲಗಳು, ಕುರಿಗಳಿಗೆ ಮೇವಾದ ಬೆಳೆ

# ಬೆಳೆದ ಬೆಳೆಯನ್ನೇ ನಾಶಪಡಿಸುವ ದುಃಸ್ಥಿತಿ; ರೈತನ ಕಣ್ಣೀರಿನ ಕಥೆ

**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಮುಳಗುಂದ ಭಾಗದಲ್ಲಿ ಮುಂಗಾರು ಕೈಕೊಟ್ಟ ಪರಿಣಾಮ ಕೃಷಿ ಕ್ಷೇತ್ರ ಸಂಪೂರ್ಣ ಸಂಕಷ್ಟಕ್ಕೆ ಸಿಲುಕಿದ್ದು, ಸಾಲಸೂಲ ಮಾಡಿ ಬೆಳೆದ ಬೆಳೆ ಒಣಗಿ ಹಾಳಾಗಿರುವುದನ್ನು ನೋಡಲಾಗದೆ, ಕನಿಷ್ಠ ಕುರಿಗಳಿಗೆ ಮೇವಾಗಲಿ ಎಂಬ ಆಶಯದಿಂದ ರೈತರು ತಮ್ಮ ಹೊಲಗಳನ್ನೇ ಕುರಿ ಮೇಯಿಸಲು ಬಿಡುತ್ತಿರುವ ಮನಕಲಕುವ ದೃಶ್ಯಗಳು ಕಂಡು ಬರುತ್ತಿವೆ.

ಈ ವರ್ಷ ಸಮರ್ಪಕ ಮಳೆಯಾಗದ ಹಿನ್ನೆಲೆಯಲ್ಲಿ ಶೇಂಗಾ, ಹೆಸರು, ಗೋವಿನ ಜೋಳ, ಮೆಣಸಿನಕಾಯಿ, ಈರುಳ್ಳಿ, ಉದ್ದು ಸೇರಿದಂತೆ ಹಲವು ಬೆಳೆಗಳು ತೇವಾಂಶದ ಕೊರತೆಯಿಂದ ಒಣಗಿ ನಲುಗಿವೆ. ಸಾವಿರಾರು ರೂಪಾಯಿ ವೆಚ್ಚ ಮಾಡಿ ಬಿತ್ತನೆ ಮಾಡಿದ ಬೆಳೆಗಳು ಇಳುವರಿ ನೀಡುವ ನಿರೀಕ್ಷೆಯನ್ನೇ ಕೈಬಿಟ್ಟಿರುವ ರೈತರು, ಬೆಳೆಯನ್ನು ಜಾನುವಾರುಗಳಿಗೆ ಮೇವಾಗಲು ಬಿಟ್ಟಿದ್ದಾರೆ.

ಬೆಳೆ ಉಳಿಸಿಕೊಳ್ಳಲು ಕೆಲ ರೈತರು ಬೋರ್‌ವೆಲ್ ನೀರು ಬಳಸಿ ಕೃತಕ ನೀರಾವರಿ ಮಾಡಿದರೂ ಪ್ರಯೋಜನವಾಗಿಲ್ಲ. ಅಂತರ್ಜಲ ಮಟ್ಟ ಕುಸಿಯುತ್ತಿರುವ ಕಾರಣ



ನೀರು ಪೂರೈಸುವುದಕ್ಕೂ ರೈತರು ಹಿಂದೇಟು ಹಾಕುತ್ತಿದ್ದಾರೆ. ಇದೇ ಪರಿಸ್ಥಿತಿ ಮುಂದುವರಿದರೆ ಜಾನುವಾರುಗಳಿಗೆ ಕುಡಿಯುವ ನೀರು ಮತ್ತು ಮೇವು ಎರಡರ ಕೊರತೆಯೂ ಎದುರಾಗುವ ಆತಂಕ ವ್ಯಕ್ತವಾಗಿದೆ.

ಕೆಲವೆಡೆ ರೈತರು ಬೆಳೆಗಳನ್ನು ಟ್ರ್ಯಾಕ್ಟರ್ ಮೂಲಕ ಹರಗಿ ನಾಶಪಡಿಸುತ್ತಿದ್ದು, ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ರೈತರ ಸಂಕಷ್ಟಕ್ಕೆ ಸಮರ್ಪಕವಾಗಿ ಸ್ಪಂದಿಸುತ್ತಿಲ್ಲ

> **ಮೂರು ಎಕರೆ ಗೋವಿನ ಜೋಳ ಬೆಳೆ ಮಳೆ ಇಲ್ಲದೆ ಸಂಪೂರ್ಣ ಒಣಗಿದೆ. ಇಳುವರಿ ಸಿಗುವ ನಿರೀಕ್ಷೆ ಇಲ್ಲದ ಕಾರಣ ಕುರಿಗಳಿಗೆ ಮೇಯಲು ಬಿಟ್ಟಿದ್ದೇನೆ. ಜಿಲ್ಲೆಯ ರೈತರೆಲ್ಲರೂ ತೀವ್ರ ಸಂಕಷ್ಟದಲ್ಲಿದ್ದಾರೆ. ಸರ್ಕಾರ ಗದಗ ಜಿಲ್ಲೆಯನ್ನು ತಕ್ಷಣ ಬರಪೀಡಿತ ಪ್ರದೇಶವೆಂದು ಘೋಷಿಸಿ, ಬೆಳೆ ವಿಮೆ ಹಾಗೂ ಬರ ಪರಿಹಾರ ಬಿಡುಗಡೆ ಮಾಡಬೇಕು.**
>
> **- ಭೀಮನಗೌಡ ಪಾಟೀಲ,** ರೈತ, ಶಿರುಂಜ ಗ್ರಾಮ

ಎಂಬ ಆಕ್ರೋಶ ವ್ಯಕ್ತವಾಗಿದೆ. ಬೆಳೆ ಹಾನಿ ಪರಿಶೀಲನೆ ಹೆಸರಲ್ಲಿ ಕಾಟಾಚಾರದ ಭೇಟಿ ಮಾತ್ರ ನಡೆಯುತ್ತಿದ್ದು, ರೈತರು ಆರ್ಥಿಕವಾಗಿ ಸಂಪೂರ್ಣ ಕುಸಿದುಬಿದ್ದಿದ್ದಾರೆ.

ರೈತರಾದ ಅಜಯ್ ಗುಡ್ಡದ, ರಮೇಶ್ ನಾಗರಾಳ ಹಾಗೂ ಗಣೇಶ ಹೆಸರೆಡ್ಡಿ ಅವರು, ಸರ್ಕಾರ ಕೂಡಲೇ ಗದಗ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ, ಬರ ಪರಿಹಾರ, ಬೆಳೆ ವಿಮೆ ಹಾಗೂ ಜಾನುವಾರುಗಳಿಗೆ ಮೇವು ವ್ಯವಸ್ಥೆ ಕಲ್ಪಿಸಬೇಕೆಂದು ಆಗ್ರಹಿಸಿದ್ದಾರೆ.

# ಮೌಲ್ಯವರ್ಧನೆಯೇ ರೈತರ ಸುಭಿಕ್ಷತೆಗೆ ಮಂತ್ರ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಬರದ ಸಮಸ್ಯೆಯನ್ನು ಹಿಮ್ಮೆಟ್ಟಿಸಲು ಗಿಡಮರ ಆಧಾರಿತ ಕೃಷಿ ಅಳವಡಿಸಿಕೊಳ್ಳುವುದು ಅನಿವಾರ್ಯ. ಕೃಷಿಯಲ್ಲಿ ಮೌಲ್ಯವರ್ಧನೆಗೆ ಒತ್ತು ನೀಡಿದಾಗ ಮಾತ್ರ ರೈತ ಆರ್ಥಿಕವಾಗಿ ಸುಭಿಕ್ಷನಾಗಲು ಸಾಧ್ಯ ಎಂದು ನೆಮ್ಮದಿ ಕೃಷಿ ಪದ್ಧತಿಯ ರೂವಾರಿ, ಅನುಭವಿ ಕೃಷಿಕ ವಸಂತ್ ಮಾಲವಿ ಹೇಳಿದರು.

ತಾಲೂಕಿನ ಮ್ಯಾನೋರ್ ಫಾರ್ಮ್‌ನಲ್ಲಿ ಕೂಡ್ಲಿಗಿ ತಾಲೂಕಿನ ತೋಟಗಾರಿಕೆ ಇಲಾಖೆ, ಪರಂಪರಾಗತ ಕೃಷಿ ವಿಕಾಸ ಯೋಜನೆ ಹಾಗೂ ಕರ್ಟಸಿ ಇಂಡಿಯಾ ಸಂಸ್ಥೆಯ ಸಹಯೋಗದಲ್ಲಿ ಆಯೋಜಿಸಿದ್ದ ಅಧ್ಯಯನ ಪ್ರವಾಸದಲ್ಲಿ ಪಾಲ್ಗೊಂಡ 50ಕ್ಕೂ ಹೆಚ್ಚು ರೈತರನ್ನು ಉದ್ದೇಶಿಸಿ ಅವರು ಮಾತನಾಡಿದರು.

ತಮ್ಮ ತೋಟದಲ್ಲಿ ಬೆಳೆದಿರುವ 58ಕ್ಕೂ ಹೆಚ್ಚು ವೈವಿಧ್ಯಮಯ ಸಸ್ಯಗಳಿಂದ ತಯಾರಿಸುತ್ತಿರುವ ಮೌಲ್ಯವರ್ಧಿತ ಉತ್ಪನ್ನಗಳು, 20ಕ್ಕೂ ಅಧಿಕ ಔಷಧೀಯ ಸಸ್ಯಗಳ ಉಪಯೋಗ ಹಾಗೂ ಅವುಗಳಿಂದ ದೊರೆಯುವ ಆದಾಯದ ಬಗ್ಗೆ ರೈತರಿಗೆ ವಿವರಿಸಿದರು. ರೈತರು ಉತ್ಪಾದನೆಯ ಜೊತೆಗೆ ಮಾರುಕಟ್ಟೆಯನ್ನೂ ತಾವೇ ಸೃಷ್ಟಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಚಂದ್ರರೇಖಾ ಮಾಲವಿ ಮಾತನಾಡಿ, ನೇಸರ ಆರ್ಗ್ಯಾನಿಕ್ಸ್ ಬ್ರ್ಯಾಂಡ್ ಅಡಿ 150ಕ್ಕೂ ಹೆಚ್ಚು ಮೌಲ್ಯವರ್ಧಿತ ಉತ್ಪನ್ನಗಳನ್ನು ಗ್ರಾಹಕರಿಗೆ ತಲುಪಿಸಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ವಿಶ್ವೇಶ್ವರ ಸಜ್ಜನ, ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಸಮೀವುಲ್ಲಾ, ಕರ್ಟಸಿ ಇಂಡಿಯಾದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪದ್ಮಕಲಾ, ಯೋಗಗುರು ಶಶಿಧರ ಗುರೂಜಿ ಸೇರಿದಂತೆ ಹಲವರು ಮಾತನಾಡಿ, ನೆಮ್ಮದಿ ಕೃಷಿ ಮಾದರಿಯನ್ನು ಅಳವಡಿಸಿಕೊಳ್ಳುವಂತೆ ರೈತರಿಗೆ ಕರೆ ನೀಡಿದರು.

ಅಧ್ಯಯನ ಪ್ರವಾಸದಲ್ಲಿ ಪಾಲ್ಗೊಂಡ ರೈತರು ಮ್ಯಾನೋರ್ ಫಾರ್ಮ್‌ನ ಕೃಷಿ ಮಾದರಿಯನ್ನು ಶ್ಲಾಘಿಸಿದರು.

# ಸಚಿವ ಸಂಪುಟ ವಿಸ್ತರಣೆ ಕಾಂಗ್ರೆಸ್‌ಗೆ ವರವಲ್ಲ, ಸಂಕಟ

**ವಿಜಯಸಾಕ್ಷಿ ಸುದ್ದಿ, ಗದಗ**



ನೂತನ ಸಚಿವ ಸಂಪುಟ ರಚನೆ ವೇಳೆ ಸಾಕಷ್ಟು ಗೊಂದಲಕ್ಕೆ ಕಾರಣವಾದ ಕಾಂಗ್ರೆಸ್ ಸರ್ಕಾರ ಈಗ ಅದೇ ಸಂಪುಟ ವಿಸ್ತರಣೆಯಿಂದ ಅಸಮಾಧಾನದ ಸಂಕಟ ಎದುರಿಸುತ್ತಿದೆ ಎಂದು ಬಿಜೆಪಿ ಮುಖಂಡ ಹಾಗೂ ಉದ್ಯಮಿ ವಿಜಯಕುಮಾರ ಗಡ್ಡಿ ಆರೋಪಿಸಿದ್ದಾರೆ.

ಪತ್ರಿಕಾ ಪ್ರಕಟಣೆಯಲ್ಲಿ ಅವರು, ನೂತನ ಸಚಿವರ ಪ್ರಮಾಣವಚನ ಸಮಾರಂಭಕ್ಕೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಗೈರಾಗಿರುವುದು ಕಾಂಗ್ರೆಸ್‌ನ ಆಂತರಿಕ ಭಿನ್ನಾಭಿಪ್ರಾಯಕ್ಕೆ ಸಾಕ್ಷಿಯಾಗಿದೆ. ಸಚಿವ ಸಂಪುಟ ವಿಸ್ತರಣೆಯ ಬಳಿಕ ಹಲವು ಕಾಂಗ್ರೆಸ್ ಶಾಸಕರು ಬಹಿರಂಗವಾಗಿ ಅಸಮಾಧಾನ ವ್ಯಕ್ತಪಡಿಸುತ್ತಿರುವುದು ಸರ್ಕಾರದೊಳಗಿನ ಭಿನ್ನಮತವನ್ನು ಬಯಲಿಗೆಳೆದಿದೆ ಎಂದು ಹೇಳಿದರು. ಸಚಿವ ಸ್ಥಾನ ಹಂಚಿಕೆಯಲ್ಲಿ ಕಾಂಗ್ರೆಸ್ ನಾಯಕತ್ವ ಸಂಪೂರ್ಣ ವಿಫಲವಾಗಿದೆ. ಜನರ ಸಮಸ್ಯೆಗಳತ್ತ ಗಮನ ಹರಿಸುವ ಬದಲು ಅಧಿಕಾರಕ್ಕಾಗಿ ಕಾಂಗ್ರೆಸ್ ನಾಯಕರು ಒಳಜಗಳದಲ್ಲೇ ತೊಡಗಿದ್ದಾರೆ ಎಂದು ಟೀಕಿಸಿದರು.

ಬಿಜೆಪಿ ಅಧಿಕಾರದಲ್ಲಿದ್ದಾಗ ಪಕ್ಷದಲ್ಲಿ ಒಗ್ಗಟ್ಟಿಲ್ಲ ಎಂದು ಟೀಕಿಸುತ್ತಿದ್ದ ಕಾಂಗ್ರೆಸ್ ನಾಯಕರು, ಈಗ ಸಚಿವ ಸ್ಥಾನ ಸಿಗಲಿಲ್ಲವೆಂದು ತಮ್ಮದೇ ಶಾಸಕರು ರಾಜೀನಾಮೆ ನೀಡುತ್ತಿರುವ ಬಗ್ಗೆ ಏನು ಉತ್ತರ ನೀಡುತ್ತಾರೆ ಎಂದು ಪ್ರಶ್ನಿಸಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರ ಸಚಿವ ಸಂಪುಟ ವಿಸ್ತರಣೆ ಅನೇಕ ಶಾಸಕರ ಅಸಮಾಧಾನಕ್ಕೆ ಕಾರಣವಾಗಿದ್ದು, ಮುಂದಿನ ದಿನಗಳಲ್ಲಿ ಅದರ ರಾಜಕೀಯ ಪರಿಣಾಮ ಎದುರಾಗಲಿದೆ. ಕಾಂಗ್ರೆಸ್ ಆಡಳಿತದಲ್ಲಿ ಜನಪರ ಆಡಳಿತ ಎಂಬುದು ಕೇವಲ ಮರೀಚಿಕೆಯಾಗಿದ್ದು, ಸಚಿವ ಸಂಪುಟ ವಿಸ್ತರಣೆಯು ಸರ್ಕಾರಕ್ಕೆ ಬಲ ನೀಡುವ ಬದಲು ಭಿನ್ನಾಭಿಪ್ರಾಯವನ್ನು ಮತ್ತಷ್ಟು ಹೆಚ್ಚಿಸಿದೆ ಎಂದು ವಿಜಯಕುಮಾರ ಗಡ್ಡಿ ತಿಳಿಸಿದ್ದಾರೆ.

## ವಿಶ್ವ ಸ್ತನ್ಯಪಾನ ಸಪ್ತಾಹ ಅಂಗವಾಗಿ ಗದಗ ಐಎಂಎ ಜಾಗೃತಿ ಕಾರ್ಯಕ್ರಮ

# ತಾಯಿಯ ಎದೆಹಾಲೇ ಮಗುವಿನ ಮೊದಲ ಲಸಿಕೆ

**ವಿಜಯಸಾಕ್ಷಿ ಸುದ್ದಿ, ಗದಗ**

ತಾಯಿಯ ಎದೆಹಾಲು ಮಗುವಿಗೆ ಕೇವಲ ಆಹಾರವಲ್ಲ, ಅದು ಜೀವ ರಕ್ಷಕ ಅಮೃತ. ಸ್ತನ್ಯಪಾನದಿಂದ ತಾಯಿ-ಮಗುವಿನ ಬಾಂಧವ್ಯ ಗಟ್ಟಿಯಾಗುವುದರ ಜೊತೆಗೆ ಇಬ್ಬರ ಆರೋಗ್ಯವೂ ಉತ್ತಮವಾಗಿರುತ್ತದೆ ಎಂದು ಗದಗ ಐಎಂಎ ನಿಕಟಪೂರ್ವ ಅಧ್ಯಕ್ಷೆ ಹಾಗೂ ಪ್ರಸೂತಿ-ಸ್ತ್ರೀರೋಗ ತಜ್ಞೆ ಡಾ. ರಾಧಿಕಾ ಕುಲಕರ್ಣಿ ಹೇಳಿದರು.




ನಗರದ ಡಾ. ಉದಯ ಕುಲಕರ್ಣಿ ಹೆರಿಗೆ ಆಸ್ಪತ್ರೆಯಲ್ಲಿ ವಿಶ್ವ ಸ್ತನ್ಯಪಾನ ಸಪ್ತಾಹ ಅಂಗವಾಗಿ ಹಮ್ಮಿಕೊಂಡಿದ್ದ ಮಹಿಳಾ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹೆರಿಗೆಯಾದ ಮೊದಲ ಒಂದು ಗಂಟೆಯನ್ನು 'ಸುವರ್ಣ ಘಳಿಗೆ' ಎಂದು ಕರೆಯಲಾಗುತ್ತದೆ.

ಈ ಅವಧಿಯಲ್ಲಿ ಮಗುವಿಗೆ ಕಿಣ್ಣೆ ಹಾಲು (ಇಟ್ಟಟಠತ್ತಿಇ) ಉಣಿಸುವುದು ಅತ್ಯಂತ ಅಗತ್ಯವಾಗಿದ್ದು, ಇದು ಮಗುವಿಗೆ ಮೊದಲ ಲಸಿಕೆಯಂತೆ ಕಾರ್ಯನಿರ್ವಹಿಸಿ ರೋಗನಿರೋಧಕ ಶಕ್ತಿ ಹೆಚ್ಚಿಸುತ್ತದೆ ಎಂದು ತಿಳಿಸಿದರು.

ಎದೆಹಾಲಿನಲ್ಲಿರುವ ಪ್ರತಿಕಾಯಗಳು ಹಾಗೂ ಪೌಷ್ಟಿಕಾಂಶಗಳು ಮಗುವನ್ನು ಅತಿಸಾರ, ನ್ಯುಮೋನಿಯಾ, ಕಿವಿ ಸೋಂಕು ಹಾಗೂ ಅಲರ್ಜಿ ಸೇರಿದಂತೆ ಹಲವು ಕಾಯಿಲೆಗಳಿಂದ ರಕ್ಷಿಸುತ್ತವೆ.

ವಿಶ್ವ ಆರೋಗ್ಯ ಸಂಸ್ಥೆಯ ಮಾರ್ಗಸೂಚಿಯಂತೆ ಮೊದಲ ಆರು ತಿಂಗಳು ಕೇವಲ ಎದೆಹಾಲು ಮಾತ್ರ ನೀಡಬೇಕು. ನಂತರ ಎರಡು ವರ್ಷಗಳವರೆಗೆ ಪೂರಕ ಆಹಾರದೊಂದಿಗೆ ಸ್ತನ್ಯಪಾನ ಮುಂದುವರಿಸಬೇಕು ಎಂದು ಸಲಹೆ ನೀಡಿದರು.

ಸ್ತನ್ಯಪಾನದಿಂದ ತಾಯಿಯಲ್ಲೂ ಗರ್ಭಕೋಶ ಶೀಘ್ರ ಸಂಕುಚಿತಗೊಳ್ಳುವುದು, ರಕ್ತಸ್ರಾವ ಕಡಿಮೆಯಾಗುವುದು, ಸ್ತನ ಮತ್ತು ಅಂಡಾಶಯ ಕ್ಯಾನ್ಸರ್ ಅಪಾಯ ತಗ್ಗುವುದು ಸೇರಿದಂತೆ ಹಲವು ಆರೋಗ್ಯ ಪ್ರಯೋಜನಗಳಿವೆ. ಎದೆಹಾಲುಣಿಸಿದರೆ ಸೌಂದರ್ಯ ಕುಂದುತ್ತದೆ ಎಂಬುದು ಮೂಢನಂಬಿಕೆ ಎಂದು ಅವರು ಸ್ಪಷ್ಟಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಡಾ. ಉದಯ ಕುಲಕರ್ಣಿ, ಸ್ತನ್ಯಪಾನದ ಮಹತ್ವದ ಕುರಿತು ಐಎಂಎ ವತಿಯಿಂದ ನಿರಂತರ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ಮಹಿಳೆಯರು, ಬಾಣಂತಿಯರು, ಆಶಾ ಕಾರ್ಯಕರ್ತೆಯರು ಹಾಗೂ ಆಸ್ಪತ್ರೆ ಸಿಬ್ಬಂದಿ ಪಾಲ್ಗೊಂಡಿದ್ದರು.

## ಹೊಂಬಳ ಗ್ರಾಮದಲ್ಲಿ ವಿಶ್ವ ಸ್ತನ್ಯಪಾನ ಸಪ್ತಾಹ ಜಾಗೃತಿ ಕಾರ್ಯಕ್ರಮ

# ಹುಟ್ಟಿದ ಮೊದಲ ಗಂಟೆಯಲ್ಲೇ ಸ್ತನ್ಯಪಾನ ಆರಂಭಿಸಿ



**ವಿಜಯಸಾಕ್ಷಿ ಸುದ್ದಿ, ಗದಗ**

ತಾಯಿಯ ಎದೆಹಾಲು ಮಗುವಿಗೆ ಅಮೃತವಿದ್ದಂತೆ. ಮಗು ಬಯಸಿದಾಗಲೆಲ್ಲ ನೀಡಬಹುದಾದ, ಯಾವುದೇ ಸಿದ್ಧತೆ ಅಗತ್ಯವಿಲ್ಲದ ಸಂಪೂರ್ಣ ಆಹಾರವೇ ತಾಯಿಯ ಹಾಲು ಎಂದು ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ. ಬೆನ್ನೂರ ಹೇಳಿದರು. ಗದಗ ತಾಲೂಕಿನ ಹೊಂಬಳ ಗ್ರಾಮದ 9ನೇ ಅಂಗನವಾಡಿ ಕೇಂದ್ರದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸ್ಥಳೀಯ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಂಯುಕ್ತವಾಗಿ ಆಯೋಜಿಸಿದ್ದ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಸುಸ್ಥಿರ ಜೀವನದ ಭದ್ರ ಅಡಿಪಾಯಕ್ಕಾಗಿ ಸ್ತನ್ಯಪಾನ ಪರಿಣಾಮಕಾರಿ ವಿಧಾನಗಳನ್ನು ಸದೃಢಗೊಳಿಸೋಣ ಎಂಬ ಈ ವರ್ಷದ ಧ್ಯೇಯವಾಕ್ಯದಡಿ ಕಾರ್ಯಕ್ರಮ ನಡೆಯಿತು. ಹೆರಿಗೆಯಾದ ಮೊದಲ ಒಂದು ಗಂಟೆಯೊಳಗೆ ಸ್ತನ್ಯಪಾನ ಆರಂಭಿಸಿ, ಮೊದಲ ಆರು ತಿಂಗಳು ಕೇವಲ ತಾಯಿಯ ಹಾಲನ್ನೇ ನೀಡಬೇಕು ಎಂದು ಅವರು ತಿಳಿಸಿದರು.

ಸ್ತನ್ಯಪಾನದಿಂದ ಮಗುವಿಗೆ ಉತ್ತಮ ಪೌಷ್ಟಿಕಾಂಶ, ರೋಗನಿರೋಧಕ ಶಕ್ತಿ, ಆರೋಗ್ಯಕರ ಬೆಳವಣಿಗೆ ದೊರೆಯುವುದರ ಜೊತೆಗೆ ತಾಯಿ-ಮಗುವಿನ ಬಾಂಧವ್ಯ ಮತ್ತಷ್ಟು ಗಟ್ಟಿಯಾಗುತ್ತದೆ. ಎರಡು ವರ್ಷಗಳವರೆಗೆ ಪೂರಕ ಆಹಾರದೊಂದಿಗೆ ಎದೆಹಾಲು ಮುಂದುವರಿಸುವುದು ಮಗುವಿನ ಸಮಗ್ರ ಬೆಳವಣಿಗೆಗೆ ಅತ್ಯಂತ ಅಗತ್ಯ ಎಂದು ಅವರು ಹೇಳಿದರು. ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಲ್.ಎಫ್. ನಾರ್ಶಿ ಮಾತನಾಡಿ, ಗರ್ಭಿಣಿಯರು ನಿಗದಿತ ಅವಧಿಯಲ್ಲಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವ ಮೂಲಕ ಆರೋಗ್ಯವಂತ ಮಗುವಿಗೆ ಜನ್ಮ ನೀಡಲು ಸಾಧ್ಯ ಎಂದರು.

ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಅನಿಸಾ ಹೆಚ್.ವೈ. ಅವರು ಮಗುವಿಗೆ ಸರಿಯಾದ ರೀತಿಯಲ್ಲಿ ಹಾಲುಣಿಸುವ ವಿಧಾನವನ್ನು ಪ್ರಾತ್ಯಕ್ಷಿಕೆ ಮೂಲಕ ತಾಯಂದಿರಿಗೆ ವಿವರಿಸಿದರು. ಕಾರ್ಯಕ್ರಮದಲ್ಲಿ ಅಂಗನವಾಡಿ ಕಾರ್ಯಕರ್ತೆ ಆರ್.ಎಸ್. ಹನಸಿ, ಆಶಾ ಕಾರ್ಯಕರ್ತೆಯರಾದ ಕೆ.ಟಿ. ಕೇಮಾವಿ, ಬಿ.ಡಿ. ಕಾವೇರಿ, ಗರ್ಭಿಣಿಯರು, ಬಾಣಂತಿಯರು ಹಾಗೂ ಮಕ್ಕಳ ತಾಯಂದಿರು ಭಾಗವಹಿಸಿದ್ದರು.

# ದೇಶಭಕ್ತಿ ಗೀತಗಾಯನ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಭಾರತ ಸ್ಕೌಟ್ಸ್ ಮತ್ತು ಗೈಡ್ಸ್, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಗದಗ ನಗರ ವತಿಯಿಂದ ಆಯೋಜಿಸಿದ್ದ ದೇಶಭಕ್ತಿ ಗೀತಗಾಯನ ಸ್ಪರ್ಧೆಯಲ್ಲಿ ಪ್ರಕಲ್ಪ ಹಿರಿಯ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿನಿಯರು ದ್ವಿತೀಯ ಸ್ಥಾನ ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ.



ಗದಗದ ವಿ.ಡಿ.ಎಸ್. ಟಿ.ಸಿ. ಬಾಲಕಿಯರ ಸ್ಪರ್ಶ ಪ್ರೌಢಶಾಲೆಯಲ್ಲಿ ನಡೆದ ಸ್ಪರ್ಧೆಯಲ್ಲಿ ಶಾಲೆಯ ವಿದ್ಯಾರ್ಥಿನಿಯರಾದ ಮೇಹವಿಶ್ ಬೇಲೇರಿ, ಇಶಾರತ್ ಟೋಪಿವಾಲೆ, ಸನ್ಮತಿ ಗೊಬ್ಬರಗುಂಪಿ, ಭಾಗ್ಯಶ್ರೀ ರೋಟಿ, ಹರ್ಷಿತಾ ಹುಚ್ಚನಗೌಡರ, ಸಬಿಯಾ ಟೋಪಿವಾಲೆ ಹಾಗೂ ಗಾರವಾಡ ಭಾಗವಹಿಸಿ ಸಮೂಹಗಾಯನದ ಮೂಲಕ ದೇಶಭಕ್ತಿ, ಶಿಸ್ತು ಮತ್ತು ಏಕತೆಯ ಸಂದೇಶ ಸಾರಿದರು.

ಕಾರ್ಯಕ್ರಮದಲ್ಲಿ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ನಗರದ ಪ್ರಧಾನ ಕಾರ್ಯದರ್ಶಿ ಗೀತಾ ದೇವಾಂಗಮಠ, ಕೋಶಾಧ್ಯಕ್ಷ ಟಿ.ಆರ್. ಬೇವಿನಮರದ, ಉಪಾಧ್ಯಕ್ಷ ಎನ್.ಎಸ್. ಹಂಜಗಿ, ಬಿಆರ್‌ಪಿ ಪ್ರಕಾಶ ಮಂಗಳೂರು ಹಾಗೂ ಶಾಲೆಯ ಮುಖ್ಯೋಪಾಧ್ಯಾಯರು ಉಪಸ್ಥಿತರಿದ್ದರು.

ಈ ಸಾಧನೆಗೆ ವಿದ್ಯಾರ್ಥಿನಿಯರನ್ನು ಅಭಿನಂದಿಸಿದ ಸಂಸ್ಥಾಪಕ ಅಧ್ಯಕ್ಷ ಎಸ್.ವ್ಹಿ. ಹುಬ್ಬಳ್ಳಿ, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳಲ್ಲಿ ಶಿಸ್ತು, ಸೇವಾ ಮನೋಭಾವ, ದೇಶಭಕ್ತಿ ಹಾಗೂ ನಾಯಕತ್ವದ ಗುಣಗಳನ್ನು ಬೆಳೆಸುವ ಮಹತ್ವದ ಸಂಸ್ಥೆಯಾಗಿದೆ ಎಂದು ಹೇಳಿದರು. ಮಾರ್ಗದರ್ಶಕಿ ಎಸ್.ಎಸ್. ಹುಬ್ಬಳ್ಳಿ, ಕಾರ್ಯದರ್ಶಿ ಪಿ.ಎಸ್. ಹುಬ್ಬಳ್ಳಿ, ಮುಖ್ಯೋಪಾಧ್ಯಾಯಿನಿ ಎಂ.ಕೆ. ಭಜಂತ್ರಿ ಹಾಗೂ ಮಾರ್ಗದರ್ಶನ ನೀಡಿದ ಶಿಕ್ಷಕಿ ಪುಷ್ಪ ಮೇಗೇರಿ ವಿದ್ಯಾರ್ಥಿನಿಯರನ್ನು ಅಭಿನಂದಿಸಿ, ಮುಂದಿನ ದಿನಗಳಲ್ಲೂ ಇನ್ನಷ್ಟು ಸಾಧನೆ ಮಾಡುವಂತೆ ಶುಭ ಹಾರೈಸಿದರು.

# ಸರ್ವಧರ್ಮೀಯ ಉಚಿತ ಸಾಮೂಹಿಕ ವಿವಾಹಕ್ಕೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗದ ಕಾಶೀವಿಶ್ವನಾಥ ನಗರದಲ್ಲಿ ನಡೆಯಲಿರುವ ಕಾಶೀವಿಶ್ವನಾಥ ರಥೋತ್ಸವ ಹಾಗೂ ಜಗನ್ಮಾತೆ ದುರ್ಗಾದೇವಿ ಉಡಿ ತುಂಬುವ ಕಾರ್ಯಕ್ರಮದ ಅಂಗವಾಗಿ 34ನೇ ವರ್ಷದ ಸರ್ವಧರ್ಮೀಯ ಉಚಿತ ಸಾಮೂಹಿಕ ವಿವಾಹವನ್ನು ಸೆಪ್ಟೆಂಬರ್ 4ರಂದು ಹಮ್ಮಿಕೊಳ್ಳಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಗದಗದ ಹಳೇ ಜಿಲ್ಲಾಧಿಕಾರಿ ಕಚೇರಿ ಹಿಂಭಾಗದ ಕಾಶೀವಿಶ್ವನಾಥ ನಗರದಲ್ಲಿರುವ ದೇವಪ್ಪ ಮಳಗಿ (ಮೊ.: 98444 74736) ಅವರನ್ನು ಸಂಪರ್ಕಿಸಬಹುದು ಎಂದು ಜಾತ್ರಾ ಸಮಿತಿ ಅಧ್ಯಕ್ಷ ಸಂಗಮೇಶ ಅಂಗಡಿ ಹಾಗೂ ಕಾರ್ಯದರ್ಶಿ ಕುಮಾರ ಜಗಲೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಕ್ಷಿಪ್ತ ಸುದ್ದಿಗಳು

# ಕೃಷಿ ಪ್ರಶಸ್ತಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

2026-27ನೇ ಸಾಲಿನ ಕೃಷಿ ಪ್ರಶಸ್ತಿ ಯೋಜನೆಯಡಿ ರೈತರಲ್ಲಿ ಆರೋಗ್ಯಕರ ಸ್ಪರ್ಧಾತ್ಮಕ ಮನೋಭಾವ ಬೆಳೆಸುವ ಉದ್ದೇಶದಿಂದ ರಾಜ್ಯ, ಜಿಲ್ಲಾ ಹಾಗೂ ತಾಲೂಕು ಮಟ್ಟದ ಕೃಷಿ ಪ್ರಶಸ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಮುಂಗಾರು ಹಂಗಾಮಿನಲ್ಲಿ ಹೆಸರು, ಗೋವಿನ ಜೋಳ ಹಾಗೂ ಶೇಂಗಾ (ಮಳೆಯಾಶ್ರಿತ) ಬೆಳೆಗಳಿಗೆ ಬೆಳೆ ಸ್ಪರ್ಧೆ ನಡೆಸಲಾಗುತ್ತಿದ್ದು, ಪ್ರತಿ ಬೆಳೆಗೆ ಮೂರು ಬಹುಮಾನಗಳನ್ನು ನೀಡಲಾಗುತ್ತದೆ.

ಆಸಕ್ತ ರೈತರು ಹಾಗೂ ರೈತ ಮಹಿಳೆಯರು ಕೆ-ಕಿಸಾನ್ ಪೋರ್ಟಲ್ ಮೂಲಕ ಸಿಟಿಜನ್ ಲಾಗಿನ್ ಅಥವಾ ರೈತ ಸಂಪರ್ಕ ಕೇಂದ್ರದ ಲಾಗಿನ್ ಬಳಸಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಎಫ್ಐಡಿ (ಊಖಿಐಖಖ ಐಈ) ಕಡ್ಡಾಯವಾಗಿದೆ. ಅರ್ಜಿಯೊಂದಿಗೆ ಪಹಣಿ, ರೈತರ ಭಾವಚಿತ್ರ, ಗುರುತಿನ ಚೀಟಿ, ಬ್ಯಾಂಕ್ ಪಾಸ್ ಬುಕ್ ಪ್ರತಿ ಹಾಗೂ ಪರಿಶಿಷ್ಟ ಜಾತಿ/ಪಂಗಡದ ರೈತರಾದಲ್ಲಿ ಜಾತಿ ಪ್ರಮಾಣಪತ್ರ ಸಲ್ಲಿಸಬೇಕು. ಅರ್ಜಿ ಸಲ್ಲಿಕೆಗೆ ಯಾವುದೇ ಶುಲ್ಕ ಇರುವುದಿಲ್ಲ.

ಆಗಸ್ಟ್ 31, 2026 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಿತ ರೈತ ಸಂಪರ್ಕ ಕೇಂದ್ರ ಅಥವಾ ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಪ್ರಜಾಪ್ರಭುತ್ವ ಸಂಭ್ರಮಕ್ಕೆ ಸಾಕ್ಷಿಯಾದ ವಿದ್ಯಾರ್ಥಿ ಸಂಘ ಚುನಾವಣೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಎಸ್.ಟಿ.ಪಿ.ಎಂ.ಬಿ. ಕಲಾ ಹಾಗೂ ವಾಣಿಜ್ಯ ಮಹಿಳಾ ಪದವಿ ಮಹಾವಿದ್ಯಾಲಯದಲ್ಲಿ ವಿದ್ಯಾರ್ಥಿ ಸಂಘದ ಚುನಾವಣೆ ಹಾಗೂ ನೂತನ ಪದಾಧಿಕಾರಿಗಳ ಪ್ರಮಾಣವಚನ ಸ್ವೀಕಾರ ಕಾರ್ಯಕ್ರಮ ಮಂಗಳವಾರ ಯಶಸ್ವಿಯಾಗಿ ನಡೆಯಿತು.

ವಿದ್ಯಾರ್ಥಿ ಸಂಘದ ಅಧ್ಯಕ್ಷೆ, ಉಪಾಧ್ಯಕ್ಷೆ, ಕಾರ್ಯದರ್ಶಿ, ಜಂಟಿ ಕಾರ್ಯದರ್ಶಿ ಸೇರಿದಂತೆ ವಿವಿಧ ಹುದ್ದೆಗಳಿಗೆ ವಿದ್ಯಾರ್ಥಿನಿಯರು ಉತ್ಸಾಹದಿಂದ ಸ್ಪರ್ಧಿಸಿದರು. ಮತದಾನದ ವೇಳೆ ವಿದ್ಯಾರ್ಥಿನಿಯರು ಶಿಸ್ತುಬದ್ಧವಾಗಿ ಸರದಿಯಲ್ಲಿ ನಿಂತು ಮತ ಚಲಾಯಿಸಿದ್ದು, ಕಾಲೇಜು ಆಡಳಿತ ಮಂಡಳಿ ಚುನಾವಣೆಯನ್ನು ಪಾರದರ್ಶಕವಾಗಿ ನಡೆಸಿತು.

ಮತ ಎಣಿಕೆ ಬಳಿಕ ವಿಜೇತ ಅಭ್ಯರ್ಥಿಗಳನ್ನು ಘೋಷಿಸಲಾಯಿತು. ಪ್ರಾಂಶುಪಾಲ ವಿಜಯಕುಮಾರ ಬಿಳೆಯಲಿ ಹಾಗೂ ಉಪನ್ಯಾಸಕರು ನೂತನ ಪದಾಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿ, ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಸ್ಪಂದಿಸುವುದರ ಜೊತೆಗೆ ಕಾಲೇಜಿನ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುವಂತೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ, ಸ್ನೇಹಾ ಮಾಲಿಗೌಡ್ರ, ಲಕ್ಷ್ಮಿ ಪಾಟೀಲ ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ನಿಧನ

## ಕಬ್ಬೇರ್ ಗಿಡ್ಡಪ್ಪ



**ಹಗರಿಬೊಮ್ಮನಹಳ್ಳಿ:** ತಾಲೂಕಿನ ಸೀಗೇನಹಳ್ಳಿ ಗ್ರಾಮದ ಕಬ್ಬೇರ್ ಗಿಡ್ಡಪ್ಪ (70) ಅವರು ವಯೋಸಹಜ ಅನಾರೋಗ್ಯದಿಂದ ಬುಧವಾರ ನಿಧನರಾದರು.

ಮೃತರು ಓರ್ವ ಪುತ್ರ, ಇಬ್ಬರು ಪುತ್ರಿಯರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಅವರ ಅಂತ್ಯಕ್ರಿಯೆಯು ಆಗಸ್ಟ್ 6ರಂದು ಬೆಳಿಗ್ಗೆ 11 ಗಂಟೆಗೆ ಹಗರಿಬೊಮ್ಮನಹಳ್ಳಿ ತಾಲೂಕಿನ ಸೀಗೇನಹಳ್ಳಿ2 ಗ್ರಾಮದಲ್ಲಿ ನಡೆಯಲಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.

# ದಂಡಿನ ದಂಪತಿಗಳ ಸೇವಾ ಬದುಕು ಸ್ಮರಿಸಿದ ಗಣ್ಯರು

**ವಿಜಯಸಾಕ್ಷಿ ಸುದ್ದಿ, ಗದಗ**

ಕಡುಬಡತನದಿಂದಲೇ ಶಿಕ್ಷಣ ಕ್ಷೇತ್ರದಲ್ಲಿ ಮಹೋನ್ನತ ಸಾಧನೆ ಮಾಡಿ ಸಾವಿರಾರು ವಿದ್ಯಾರ್ಥಿಗಳ ಬದುಕಿಗೆ ಬೆಳಕಾದ ಡಾ. ಬಿ.ಎಫ್. ದಂಡಿನ ಅವರ ಜೀವನ ಇಂದಿನ ಯುವಜನತೆಗೆ ಆದರ್ಶವಾಗಿದೆ ಎಂದು ಆರ್‌ಎಸ್‌ಎಸ್‌ನ ಅಖಿಲ ಭಾರತೀಯ ವ್ಯವಸ್ಥ ಪ್ರಮುಖ ಮಂಗೇಶ್ ಬೆಂಡೆಜಿ ಹೇಳಿದರು.

ನಗರದ ಗಾಣಿಗ ಭವನದಲ್ಲಿ ಕನಕದಾಸ ಶಿಕ್ಷಣ ಸಮಿತಿ ಹಾಗೂ ಡಾ. ಬಿ.ಎಫ್. ದಂಡಿನ ವಿದ್ಯಾರ್ಥಿ ಬಳಗದ ಆಶ್ರಯದಲ್ಲಿ ನಡೆದ ಡಾ. ಬಿ.ಎಫ್. ದಂಡಿನ ಹಾಗೂ ಶಕುಂತಲಾಬಾಯಿ ದಂಡಿನ ಅವರ ಸಾರ್ವಜನಿಕ ನುಡಿನಮನ ಸಭೆ ಮತ್ತು ಸ್ಮಾರಕ ಭೂಮಿಪೂಜೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಾಗಿನೆಲೆ ಶ್ರೀ ರೇವಣಸಿದ್ದೇಶ್ವರ ಸಂಸ್ಥಾನ ಮಠದ ಶ್ರೀಗಳು ಮಾತನಾಡಿ, ದಂಡಿನ ಅವರು ಶಿಕ್ಷಣವನ್ನು ಸಾಮಾಜಿಕ ಚಳವಳಿಯನ್ನಾಗಿ ರೂಪಿಸಿದ ಅಪರೂಪದ ಮಹನೀಯರು ಎಂದು ಬಣ್ಣಿಸಿದರು. ನರಗುಂದ ಶಾಸಕ ಸಿ.ಸಿ. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಡಾ. ತೇಜಸ್ವಿ ಕಟ್ಟಿಮನಿ, ಮಲ್ಲಿಕಾರ್ಜುನ ಸಿದ್ದಣ್ಣನವರ, ದೊಡ್ಡನಗೌಡ ಪಾಟೀಲ ಸೇರಿದಂತೆ ಹಲವು ಗಣ್ಯರು ದಂಡಿನ ದಂಪತಿಗಳ ಶಿಕ್ಷಣ ಸೇವೆ ಮತ್ತು ಸಮಾಜಮುಖಿ ಕಾರ್ಯವನ್ನು ಸ್ಮರಿಸಿ ನಮನ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಮಠಾಧೀಶರು, ಜನಪ್ರತಿನಿಧಿಗಳು, ಶಿಕ್ಷಣ ತಜ್ಞರು, ಕನಕದಾಸ ಶಿಕ್ಷಣ ಸಮಿತಿಯ ಪದಾಧಿಕಾರಿಗಳು, ನೂರಾರು ಹಳೆಯ ವಿದ್ಯಾರ್ಥಿಗಳು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



### ನಮೂನೆ 6, 8 ಸಲ್ಲಿಕೆಗೆ ಜಿಲ್ಲಾಧಿಕಾರಿ ಕರೆ | ವಿಶೇಷ ಪರಿಷ್ಕರಣೆಯಲ್ಲಿ ಸಾರ್ವಜನಿಕರ ಸಹಕಾರಕ್ಕೆ ಮನವಿ

# ಮತದಾರರ ಪಟ್ಟಿಯಲ್ಲಿ ತಪ್ಪಿದ್ದರೆ ಈಗಲೇ ಸರಿಪಡಿಸಿಕೊಳ್ಳಿ



**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಮತದಾರರ ಪಟ್ಟಿಯಲ್ಲಿ ಹೆಸರು, ತಂದೆ ಅಥವಾ ಪತಿಯ ಹೆಸರು, ವಯಸ್ಸು, ಫೋಟೊ ಸೇರಿದಂತೆ ಯಾವುದೇ ವಿವರಗಳಲ್ಲಿ ದೋಷಗಳಿದ್ದರೆ ಅವುಗಳನ್ನು ತಕ್ಷಣ ತಿದ್ದುಪಡಿ ಮಾಡಿಸಿಕೊಳ್ಳಬೇಕು. ಒಂದೇ ವಿಧಾನಸಭಾ ಕ್ಷೇತ್ರದೊಳಗೆ ವಿಳಾಸ ಬದಲಾದ ಮತದಾರರು ಹೊಸ ಮತಗಟ್ಟೆಗೆ ಹೆಸರು ಸ್ಥಳಾಂತರಿಸಲು ನಮೂನೆ8 ಸಲ್ಲಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು. ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದವರು ಹಾಗೂ ಹೊಸದಾಗಿ ಮತದಾರರ ಗುರುತಿನ ಚೀಟಿ ಪಡೆಯಬೇಕಾದವರು ನಮೂನೆ6 ಮೂಲಕ ಅರ್ಜಿ ಸಲ್ಲಿಸಬೇಕು.

ಮೃತಪಟ್ಟ ಮತದಾರರ ಮಾಹಿತಿಯನ್ನು ಕುಟುಂಬಸ್ಥರು ಸಂಬಂಧಿತ ಬಿಎಲ್‌ಒಗಳಿಗೆ ನೀಡಬೇಕು.

ಮಾಹಿತಿ ಸಿಗದಿದ್ದರೆ ಪಂಚನಾಮೆ ಆಧರಿಸಿ ಹೆಸರು ಕೈಬಿಡಲಾಗುವುದು ಎಂದು ತಿಳಿಸಿದರು. ಒಂದೇ ಕುಟುಂಬದ ಸದಸ್ಯರ ಹೆಸರುಗಳು ಮತದಾರರ ಪಟ್ಟಿಯಲ್ಲಿ ಅನುಕ್ರಮವಾಗಿ ಇರುವಂತೆ ಕ್ರಮ ಕೈಗೊಳ್ಳಲು ಮತದಾರರ ನೋಂದಣಿ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ರಾಜ್ಯ ಚುನಾವಣಾ ಆಯೋಗದ ನಿರ್ದೇಶನದಂತೆ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಪಾರದರ್ಶಕವಾಗಿ ನಡೆಯುತ್ತಿದ್ದು, ರಾಜಕೀಯ ಪಕ್ಷಗಳು ಅಥವಾ ಸಾರ್ವಜನಿಕರಿಗೆ ಯಾವುದೇ ಆಕ್ಷೇಪಣೆ, ದೂರು ಅಥವಾ ಸಮಸ್ಯೆಗಳಿದ್ದರೆ ಜಿಲ್ಲಾಡಳಿತಕ್ಕೆ ಲಿಖಿತವಾಗಿ ಸಲ್ಲಿಸಬೇಕು.

ಅವುಗಳನ್ನು ತ್ವರಿತವಾಗಿ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಜಿಲ್ಲೆಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಯಶಸ್ವಿಯಾಗಲು ಎಲ್ಲ ರಾಜಕೀಯ ಪಕ್ಷಗಳು ಹಾಗೂ ಸಾರ್ವಜನಿಕರು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಮನವಿ ಮಾಡಿದರು.

> **ಮತದಾರರ ಪಟ್ಟಿಯಲ್ಲಿ ಯಾವುದೇ ತಪ್ಪಗಳಿದ್ದರೆ ನಮೂನೆ8 ಮೂಲಕ ತಿದ್ದುಪಡಿ ಮಾಡಿಸಿಕೊಳ್ಳಿ. ಹೊಸ ಮತದಾರರು ನಮೂನೆ6 ಸಲ್ಲಿಸಿ ಹೆಸರು ಸೇರ್ಪಡೆ ಮಾಡಿಸಿಕೊಳ್ಳಬೇಕು. ಯಾವುದೇ ದೂರುಗಳಿದ್ದರೆ ಜಿಲ್ಲಾಡಳಿತಕ್ಕೆ ಲಿಖಿತವಾಗಿ ನೀಡಿ.**
> - **ಸ್ನೇಹಲ್ ಆರ್.**, ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ, ಧಾರವಾಡ

# ಸುರಕ್ಷತಾ ಸಾಧನ ಬಳಸಿ, ಆರೋಗ್ಯ ಕಾಪಾಡಿಕೊಳ್ಳಿ




**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪೌರಕಾರ್ಮಿಕರು ಪ್ರತಿದಿನ ಧೂಳು, ಕಸ, ತ್ಯಾಜ್ಯ ಹಾಗೂ ವಿವಿಧ ಸೋಂಕುಗಳ ನಡುವೆ ಕರ್ತವ್ಯ ನಿರ್ವಹಿಸುತ್ತಿರುವುದರಿಂದ ತಮ್ಮ ಆರೋಗ್ಯದ ಬಗ್ಗೆ ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ವಹಿಸಬಾರದು ಎಂದು ಆರೋಗ್ಯ ನಿರೀಕ್ಷಣಾಧಿಕಾರಿ ಮಂಜುನಾಥ ಜಾಲಿಹಾಳ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಮೀಕ್ಷಣಾ ಘಟಕ, ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ ರೋಣ ಹಾಗೂ ನಮ್ಮ ಕ್ಲಿನಿಕ್, ನರೇಗಲ್ಲ ಇವರ ಸಹಯೋಗದಲ್ಲಿ ಆಯೋಜಿಸಿದ್ದ ಆರೋಗ್ಯ ಮೇಳದಲ್ಲಿ ಅವರು ಮಾತನಾಡಿದರು.

ಪೌರಕಾರ್ಮಿಕರು ಸಮಾಜದ ಸ್ವಚ್ಛತೆಯ ನೈಜ ಶಿಲ್ಪಿಗಳಾಗಿದ್ದು, ಅವರ ಆರೋಗ್ಯ ರಕ್ಷಣೆ ಅತ್ಯಂತ ಮುಖ್ಯವಾಗಿದೆ. ಕಾಲಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದರಿಂದ ರಕ್ತದೊತ್ತಡ, ಮಧುಮೇಹ, ಕಣ್ಣಿನ ಸಮಸ್ಯೆ ಸೇರಿದಂತೆ ಹಲವು ಕಾಯಿಲೆಗಳನ್ನು ಆರಂಭಿಕ ಹಂತದಲ್ಲೇ ಪತ್ತೆಹಚ್ಚಿ ಚಿಕಿತ್ಸೆ ಪಡೆಯಬಹುದು ಎಂದು ತಿಳಿಸಿದರು. ಸಮತೋಲನ ಆಹಾರ ಸೇವನೆ, ಸಾಕಷ್ಟು ನೀರು ಕುಡಿಯುವುದು, ನಿಯಮಿತ ವ್ಯಾಯಾಮ, ವೈಯಕ್ತಿಕ ಸ್ವಚ್ಛತೆ ಪಾಲಿಸುವುದರ ಜೊತೆಗೆ ಕರ್ತವ್ಯದ ವೇಳೆ ಕೈಗವಸು, ಮಾಸ್ಕ್ ಹಾಗೂ ಸುರಕ್ಷತಾ ಬೂಟುಗಳನ್ನು ಕಡ್ಡಾಯವಾಗಿ ಬಳಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕೆ.ಎ. ಬೂದಿಹಾಳ, ರಮೇಶ್ ಹಲಗಿಯವರ, ಮಂಜುನಾಥ ಕೊಂಡುಗುರಿ, ನೀಲಪ್ಪ ಚಳ್ಳಮರದ, ರೇಷ್ಮಾ ಓಲೆಕಾರ, ಆದರ್ಶ ಪೂಜಾರ, ಚಂದ್ರು ಗಂಗರಗೊಂಡ, ರೆಹಮತ್ ಬಾನು ಶರಬತ್ತವಾಲಾ ಹಾಗೂ ಪಟ್ಟಣ ಪಂಚಾಯಿತಿ ಸಿಬ್ಬಂದಿ ಉಪಸ್ಥಿತರಿದ್ದರು.

# ಜನಪರ, ಜೀವಪರ ಧೋರಣೆಯೇ ಕವಿಯ ನಿಜವಾದ ಶಕ್ತಿ



**ವಿಜಯಸಾಕ್ಷಿ ಸುದ್ದಿ, ಗದಗ**

ಲೇಖಕರು ಸಾಮಾಜಿಕ ಜವಾಬ್ದಾರಿಯೊಂದಿಗೆ ಬರೆಯಬೇಕು. ಸಮಾಜದ ಸ್ವಾಸ್ಥ್ಯ ಕಾಪಾಡುವ ಸಾಹಿತ್ಯವೇ ಕಾಲಾತೀತವಾಗುತ್ತದೆ. ಕವಿ ಜನಪರ ಹಾಗೂ ಜೀವಪರ ಧೋರಣೆಯನ್ನು ಅಳವಡಿಸಿಕೊಂಡಾಗ ಮಾತ್ರ ಸಮಾಜದಲ್ಲಿ ಮಾನವೀಯ ಮೌಲ್ಯಗಳು ಬೆಳೆಯಲು ಸಾಧ್ಯ ಎಂದು ಸಾಹಿತಿ ವಿ. ಹರಿನಾಥಬಾಬು ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಆಯೋಜಿಸಿದ್ದ 'ಮಾಸದ ಮಾತು' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಒಂದು ಕಾಲದಲ್ಲಿ ಆಡಳಿತಗಾರರು ಕವಿ-ಲೇಖಕರ ಸಲಹೆ ಪಡೆದು ಆಡಳಿತ ನಡೆಸುತ್ತಿದ್ದರು.

ಇಂದಿನ ಯುವ ಬರಹಗಾರರ ಚಿಂತನೆಗಳು ವೈವಿಧ್ಯಮಯವಾಗಿದ್ದು, ಅವರ ಕೃತಿಗಳ ಬಗ್ಗೆ ಪೂರ್ವಾಗ್ರಹವಿಲ್ಲದ ವಿಮರ್ಶೆ ನಡೆಯಬೇಕು ಎಂದು ಅಭಿಪ್ರಾಯಪಟ್ಟರು.

ಗದುಗಿನ ಸಾಂಸ್ಕೃತಿಕ ಶ್ರೀಮಂತಿಕೆ ಹಾಗೂ ಬಸವಾದಿ ಶರಣರ ಚಿಂತನೆಗಳು ಸಾಮಾಜಿಕ ಸಮಾನತೆಗೆ ಭದ್ರ ಅಡಿಪಾಯವಾಗಿವೆ ಎಂದ ಅವರು, ತಮ್ಮ ಕವಿತೆಗಳನ್ನು ವಾಚಿಸಿದರು.

ಸಾಹಿತಿ ಸಿದ್ದು ಯಾಪಲಪರ್ವಿ ಮಾತನಾಡಿ, ವಿ. ಹರಿನಾಥಬಾಬು ಅವರು ನಾಡಿನ ಶ್ರೇಷ್ಠ ಚಿಂತಕರಲ್ಲಿ ಒಬ್ಬರಾಗಿದ್ದು, ಅವರ ವಿಚಾರ ಧಾರೆ ಇನ್ನಷ್ಟು ವ್ಯಾಪಕವಾಗಿ ಜನರನ್ನು ತಲುಪಬೇಕಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಕವಿ ಮನಸ್ಸಿನ ಅಧಿಕಾರಿಯಾಗಿ ಹರಿನಾಥಬಾಬು ಅವರು ತಮ್ಮ ಇಲಾಖೆಯಲ್ಲಿ ಪುಸ್ತಕ ಸಂಸ್ಕೃತಿ ಹಾಗೂ ಸಾಂಸ್ಕೃತಿಕ ವಾತಾವರಣ ನಿರ್ಮಿಸಿ ಮಾದರಿಯಾಗಿದ್ದಾರೆ ಎಂದು ಶ್ಲಾಘಿಸಿದರು.

ಬಳಿಕ ಸಂವಾದ ಕಾರ್ಯಕ್ರಮ ನಡೆಯಿತು. ದತ್ತಪ್ರಸನ್ನ ಪಾಟೀಲ ನಿರೂಪಿಸಿದರು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ರಾಹುಲ ಗಿಡ್ನಂದಿ ವಂದಿಸಿದರು. ಕೆ.ಎಚ್. ಬೇಲೂರ, ಚಂದ್ರಶೇಖರ ವಸ್ತ್ರದ, ಜಿ.ಬಿ. ಪಾಟೀಲ, ಅನ್ನದಾನಿ ಹಿರೇಮಠ ಸೇರಿದಂತೆ ಅನೇಕ ಸಾಹಿತಿಗಳು, ಸಾಹಿತ್ಯಾಸಕ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಇಂಟರ್‌ಲಾಕ್ ಕಾಮಗಾರಿಗೆ ಚಾಲನೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ 35ನೇ ವಾರ್ಡಿನ ಶ್ರೀ ಕಾಶಿಲಿಂಗೇಶ್ವರ ದೇವಸ್ಥಾನದ ಮುಂಭಾಗದಲ್ಲಿ ಎಂಎಲ್‌ಸಿ ಎಸ್.ವಿ. ಸಂಕನೂರ ಅವರ ಅನುದಾನದಡಿ ₹2 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾಗಿರುವ ಇಂಟರ್ ಲಾಕ್ ಫೇವರ್ಸ್ ಕಾಮಗಾರಿಯನ್ನು ಮಂಗಳವಾರ ಉದ್ಘಾಟಿಸಲಾಯಿತು.

ಈ ಸಂದರ್ಭದಲ್ಲಿ 35ನೇ ವಾರ್ಡಿನ ಸದಸ್ಯೆ ಹಾಗೂ ನಗರಸಭೆ ಮಾಜಿ ಅಧ್ಯಕ್ಷೆ ಉಷಾ ದಾಸರ, ಶ್ರೀ ಕಾಶಿಲಿಂಗೇಶ್ವರ ಸೇವಾ ಟ್ರಸ್ಟ್ ಅಧ್ಯಕ್ಷ ಡಾ. ಕಲ್ಲೇಶ ಡಿ. ಮೂರಶಿಳ್ಳಿ, ಸಾಯಿಬಾಬೂಜಿ ನಗರಾಭಿವೃದ್ಧಿ ಸಮಿತಿ ಅಧ್ಯಕ್ಷ ಎನ್.ಕೆ. ತೊಂಡಿಹಾಳ, ಗೌರವಾಧ್ಯಕ್ಷ ಎಂ.ಆರ್. ಸೋಂಪುರ, ಮಹಿಳಾ ಘಟಕದ ಅಧ್ಯಕ್ಷೆ ಲಕ್ಷ್ಮೀ ಮಡಿವಾಳರ, ಗೌರವಾಧ್ಯಕ್ಷೆ ರತ್ನಕ್ಕ ಯಳಮಲಿ, ಕಾರ್ಯದರ್ಶಿ ಎಚ್.ಬಿ. ಆದಪ್ಪನವರ, ಬಸವರಾಜ ಕುಕನೂರ, ಎಸ್.ಕೆ. ಕಂಡೆಪ್ಪಗೌಡರ, ಮಲ್ಲಣ್ಣ ಅಂಗಡಿ ಸೇರಿದಂತೆ ಟ್ರಸ್ಟ್ ಹಾಗೂ ಕಾರ್ಯಕಾರಿ ಮಂಡಳಿ ಸದಸ್ಯರು, ಬಡಾವಣೆಯ ಹಿರಿಯರು, ಮಹಿಳೆಯರು ಮತ್ತು ನಾಗರಿಕರು ಉಪಸ್ಥಿತರಿದ್ದರು.

### ಗದಗ - ಹರಪನಹಳ್ಳಿ ಯೋಜನೆ ತ್ವರಿತ ಆರಂಭಕ್ಕೆ ಪ್ರಲ್ಹಾದ್ ಜೋಶಿಗೆ ಮನವಿ

# 18 ವರ್ಷದ ಕನಸಿನ ರೈಲು ಮಾರ್ಗಕ್ಕೆ ಮತ್ತೆ ಜೀವ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗಹರಪನಹಳ್ಳಿ (ಮುಂಡರಗಿಹೂವಿನಹಡಗಲಿ ಮಾರ್ಗವಾಗಿ) ನೂತನ ರೈಲು ಮಾರ್ಗ ಯೋಜನೆಯ ಕಾಮಗಾರಿಯನ್ನು ತಕ್ಷಣ ಆರಂಭಿಸುವಂತೆ ಮುಂಡರಗಿ ತಾಲೂಕು ರೈಲ್ವೆ ಹೋರಾಟ ಸಮಿತಿಯ ನಿಯೋಗವು ಕೇಂದ್ರ ಶಿಕ್ಷಣ, ಆಹಾರ ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ಅವರಿಗೆ ಮನವಿ ಸಲ್ಲಿಸಿದೆ. ಸಮಿತಿಯ ಅಧ್ಯಕ್ಷ ಬಸವರಾಜ ಎಸ್. ದೇಸಾಯಿ ನೇತೃತ್ವದ ನಿಯೋಗವು ಆಗಸ್ಟ್ 1ರಂದು ನವದೆಹಲಿಯಲ್ಲಿರುವ ಸಚಿವರ ನಿವಾಸದಲ್ಲಿ ಭೇಟಿ ನೀಡಿ, ಸುಮಾರು 94 ಕಿ.ಮೀ. ಉದ್ದದ ಈ ರೈಲು ಮಾರ್ಗಕ್ಕೆ ಈಗಾಗಲೇ ಪ್ರಾಥಮಿಕ ಸಮೀಕ್ಷೆ ಪೂರ್ಣಗೊಂಡಿದ್ದು, ಅನುದಾನವೂ ಮಂಜೂರಾಗಿದೆ. ಹೀಗಾಗಿ ಯಾವುದೇ ವಿಳಂಬವಿಲ್ಲದೆ ಕಾಮಗಾರಿ ಆರಂಭಿಸಬೇಕು ಎಂದು ಒತ್ತಾಯಿಸಿತು.

ಕಳೆದ 18 ವರ್ಷಗಳಿಂದ ಈ ಭಾಗದ ಜನರ ಬಹುದಿನಗಳ ಬೇಡಿಕೆಯಾಗಿರುವ ಈ ಯೋಜನೆಯಿಂದ ಗದಗ, ಮುಂಡರಗಿ, ಹೂವಿನಹಡಗಲಿ ಹಾಗೂ ಹರಪನಹಳ್ಳಿ ಭಾಗಗಳ ಸಂಪರ್ಕ ಸುಧಾರಣೆಯಾಗುವುದರ ಜೊತೆಗೆ ಕೃಷಿ, ಕೈಗಾರಿಕೆ, ಪ್ರವಾಸೋದ್ಯಮ, ಉದ್ಯೋಗ ಹಾಗೂ ಉತ್ತರಮಧ್ಯ ಕರ್ನಾಟಕದ ಆರ್ಥಿಕ ಅಭಿವೃದ್ಧಿಗೆ ಹೊಸ ಚೈತನ್ಯ ಸಿಗಲಿದೆ ಎಂದು ನಿಯೋಗ ವಿವರಿಸಿತು. ಮನವಿ ಸ್ವೀಕರಿಸಿದ ಸಚಿವ ಪ್ರಲ್ಹಾದ್ ಜೋಶಿ, ಯೋಜನೆಯ ಮಹತ್ವವನ್ನು ಒಪ್ಪಿಕೊಂಡು, ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅವರೊಂದಿಗೆ ಚರ್ಚಿಸಿ, ರೈಲ್ವೆ ಸಚಿವಾಲಯದೊಂದಿಗೆ ಮಾತುಕತೆ ನಡೆಸಿ ಕಾಮಗಾರಿ ಶೀಘ್ರ ಆರಂಭಿಸಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ನಿಯೋಗದಲ್ಲಿ ಮುತ್ತಪ್ಪ ಪಾವಡಶೆಟ್ಟರ್, ನಿತಿನ್ ವಿ. ದೊಡ್ಡಣ್ಣವರ ಹಾಗೂ ಸಚಿನ್ ಬಿ. ದೇಸಾಯಿ ಉಪಸ್ಥಿತರಿದ್ದರು.

> **ಗದಗಹರಪನಹಳ್ಳಿ ರೈಲು ಮಾರ್ಗ ಈ ಭಾಗದ ಜನರ 18 ವರ್ಷದ ಕನಸು. ಕಾಮಗಾರಿ ಆರಂಭವಾಗುವವರೆಗೆ ನಮ್ಮ ಹೋರಾಟ ನಿರಂತರವಾಗಿ ಮುಂದುವರಿಯಲಿದೆ.**
> - **ಬಸವರಾಜ ಎಸ್. ದೇಸಾಯಿ,** ಅಧ್ಯಕ್ಷರು, ಮುಂಡರಗಿ ತಾಲೂಕು ರೈಲ್ವೆ ಹೋರಾಟ ಸಮಿತಿ

# ಸಂಸ್ಕಾರವೇ ಮಕ್ಕಳ ಬದುಕಿನ ಭದ್ರ ಅಡಿಪಾಯ




**ವಿಜಯಸಾಕ್ಷಿ ಸುದ್ದಿ, ಗದಗ**

ಮಕ್ಕಳ ಮನಸ್ಸಿನಲ್ಲಿ ಹೊರೆ ಎನಿಸುವ ವಿಚಾರಗಳನ್ನು ತುಂಬುವ ಬದಲು, ಜೀವನಕ್ಕೆ ಹಿತವೆನಿಸುವ ನೆನಪುಗಳು ಮತ್ತು ಉತ್ತಮ ಸಂಸ್ಕಾರಗಳನ್ನು ಬೆಳೆಸಬೇಕು ಎಂದು ಮಹೇಶ್ವರಿಸ್ವಾಮಿ ಹೊಸಳ್ಳಿಮಠ ಹೇಳಿದರು.

ನಗರದ ಪಂ. ಪುಟ್ಟರಾಜ ಬಡಾವಣೆಯ ಶ್ರೀ ಸಿದ್ಧಿವಿನಾಯಕ ದೇವಸ್ಥಾನದಲ್ಲಿ ಸಂಸ್ಕಾರ ಭಾರತಿ ಹಾಗೂ ರಾಜೇಶ್ವರಿ ಕಲಾಕುಟೀರದ ಸಂಯುಕ್ತಾಶ್ರಯದಲ್ಲಿ ಗುರುಪೂರ್ಣಿಮೆ ಅಂಗವಾಗಿ ಆಯೋಜಿಸಿದ್ದ ನಟರಾಜ ಪೂಜನ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಅವರು, ಭಾರತೀಯ ಸಂಸ್ಕೃತಿ, ಆಚಾರ-ವಿಚಾರಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವ ಕೆಲಸ ನಿರಂತರವಾಗಿ ನಡೆಯಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಖ್ಯಾತ ರಂಗಭೂಮಿ ಕಲಾವಿದೆ ಉಮಾದೇವಿ ವೀರಯ್ಯ ಹಿರೇಮಠ ಹಾಗೂ ಕಥಕ್ ನೃತ್ಯ ಕಲಾವಿದೆ ವಿದುಷಿ ವಿದ್ಯಾ ಮೊರಬ ಅವರನ್ನು ಸನ್ಮಾನಿಸಲಾಯಿತು. ಇದೇ ವೇಳೆ ನಿವೃತ್ತರಾದ ರಮೇಶ ಪಾಟೀಲ ಹಾಗೂ ಜಿ.ಎಸ್. ಹಿರೇಮಠ ಅವರನ್ನು ಬಡಾವಣೆಯ ಪರವಾಗಿ ಗೌರವಿಸಲಾಯಿತು.

ಅಧ್ಯಕ್ಷತೆ ವಹಿಸಿದ್ದ ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಉಮೇಶಗೌಡ ಪಾಟೀಲ ಮಾತನಾಡಿ, ಇಂದಿನ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡುವುದು ಪೋಷಕರ ಪ್ರಮುಖ ಜವಾಬ್ದಾರಿಯಾಗಿದೆ ಎಂದರು.

ಸಂಸ್ಕಾರ ಭಾರತಿಯ ಪ್ರಾಂತ ಕಾರ್ಯದರ್ಶಿ ವಿದುಷಿ ಹೇಮಾ ವಾಘ್ಮೋಡೆ ನಟರಾಜ ಪೂಜೆಯ ಮಹತ್ವ ಹಾಗೂ ಸನಾತನ ಧರ್ಮದ ಮೌಲ್ಯಗಳನ್ನು ವಿವರಿಸಿದರು. ಅತಿಥಿಗಳಾಗಿ ಗಂಗಾಧರ ನಭಾಪೂರ ಹಾಗೂ ಸಂಸ್ಕಾರ ಭಾರತಿ ಜಿಲ್ಲಾಧ್ಯಕ್ಷ ಪಿ.ಎ. ಕುಲಕರ್ಣಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ರಾಜೇಶ್ವರಿ ಕಲಾಕುಟೀರ ಹಾಗೂ ನಟವರಿ ನೃತ್ಯ ಕಲಾಪರಿಷತ್ತಿನ ವಿದ್ಯಾರ್ಥಿಗಳು ಕಥಕ್ ಹಾಗೂ ಭರತನಾಟ್ಯ ಪ್ರದರ್ಶನ ನೀಡಿದರು. ಕುಮಾರಿ ದನ್ವಿತಾ ಹುಬ್ಬಳ್ಳಿಮಠ ಭಗವದ್ಗೀತೆ ಪಠಿಸಿದರು.

ಕಾರ್ಯಕ್ರಮದಲ್ಲಿ ಸಂಸ್ಕಾರ ಭಾರತಿ ಪದಾಧಿಕಾರಿಗಳು, ಬಡಾವಣೆಯ ನಾಗರಿಕರು ಹಾಗೂ ಕಲಾಸಕ್ತರು ಭಾಗವಹಿಸಿದ್ದರು.

# ಆ. 8 ಮತ್ತು 9ರಂದು ರಾಜ್ಯಮಟ್ಟದ ಸೈಕ್ಲಿಂಗ್ ಸ್ಪರ್ಧೆ

**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಆಗಸ್ಟ್ 8 ಹಾಗೂ 9ರಂದು ಮುಳಗುಂದದಲ್ಲಿ ನಡೆಯಲಿರುವ ರಾಜ್ಯ ಮಟ್ಟದ ಮೌಂಟೇನ್ ಬೈಕ್ (ಎಂಟಿಬಿ) ಸೈಕ್ಲಿಂಗ್ ಸ್ಪರ್ಧೆಗೆ ಗದಗ ಜಿಲ್ಲಾ ತಂಡದ ಆಯ್ಕೆ ಪ್ರಕ್ರಿಯೆ ಭಾನುವಾರ ಪಟ್ಟಣದ ಯಲಿಶಿರುಂಜ ರಸ್ತೆಯ ಗುಡ್ಡಗಾಡು ಪ್ರದೇಶದ ಸೈಕ್ಲಿಂಗ್ ಟ್ರ್ಯಾಕ್‌ನಲ್ಲಿ ನಡೆಯಿತು.

ಜಿಲ್ಲೆಯ ವಿವಿಧ ಭಾಗಗಳಿಂದ ಒಟ್ಟು 80 ಕ್ರೀಡಾಪಟುಗಳು ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದರು. ಅಂಡರ್-14 ವಿಭಾಗದಲ್ಲಿ 4 ಬಾಲಕರು ಹಾಗೂ 4 ಬಾಲಕಿಯರು, ಅಂಡರ್-16 ವಿಭಾಗದಲ್ಲಿ 3 ಬಾಲಕರು ಮತ್ತು 3 ಬಾಲಕಿಯರು, ಜೂನಿಯರ್ ವಿಭಾಗದಲ್ಲಿ 2 ಬಾಲಕರು ಹಾಗೂ 1 ಬಾಲಕಿಯನ್ನು, ಎಲೈಟ್ ಪುರುಷರ ವಿಭಾಗದಲ್ಲಿ ಒಬ್ಬ ಹಾಗೂ ಎಲೈಟ್ ಮಹಿಳಾ ವಿಭಾಗದಲ್ಲಿ ಒಬ್ಬ ಕ್ರೀಡಾಪಟುವನ್ನು ರಾಜ್ಯಮಟ್ಟದ ಸ್ಪರ್ಧೆಗೆ ಆಯ್ಕೆ ಮಾಡಲಾಯಿತು. ಆಯ್ಕೆಯಾದ ಕ್ರೀಡಾಪಟುಗಳು ಆಗಸ್ಟ್ 8 ಮತ್ತು 9ರಂದು ಮುಳಗುಂದದಲ್ಲಿ ನಡೆಯುವ ರಾಜ್ಯ ಮಟ್ಟದ ಎಂಟಿಬಿ ಸೈಕ್ಲಿಂಗ್ ಸ್ಪರ್ಧೆಯಲ್ಲಿ ಜಿಲ್ಲೆಯ ಪ್ರತಿನಿಧಿಯಾಗಿ ಭಾಗವಹಿಸಲಿದ್ದಾರೆ.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಅಮೆಚೂರ್ ಸೈಕ್ಲಿಂಗ್ ಸಂಸ್ಥೆಯ ತಾಂತ್ರಿಕ ಸಲಹೆಗಾರ ಎಂ.ಐ. ಕಣಕೆ, ಜಿಲ್ಲಾ ಅಧ್ಯಕ್ಷ ಎಸ್.ವಿ. ಕಣವಿ, ಚಂದ್ರಶೇಖರ ದೊಡ್ಡಮನಿ, ದಾವಲ್ ಕುರ್ತಕೋಟಿ ಸೇರಿದಂತೆ ಅಮೆಚೂರ್ ಸೈಕ್ಲಿಂಗ್ ಅಸೋಸಿಯೇಷನ್‌ನ ಪದಾಧಿಕಾರಿಗಳು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka